ಸಂಪುಟ: 11 ಸಂಚಿಕೆ: 223 ಪುಟಗಳು: 4+2 ಬೆಲೆ: ₹ 3.00 ಶನಿವಾರ, ಅಕ್ಟೋಬರ್ 10, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 223 Pages : 4+2 Rate : 3.00 Saturday, october 10, 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2020-22

## ಸೋಯಾಬಿನ್‌ಗೆ ಕ್ವಿಂಟಾಲ್‌ಗೆ 5,708 ಬೆಂಬಲ ಬೆಲೆ ನಿಗದಿ



**ವಿಜಯಸಾಕ್ಷಿ ಸುದ್ದಿ, ಗದಗ**

2026-27ನೇ ಸಾಲಿನ ಕೇಂದ್ರ ಸರ್ಕಾರದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಎಫ್‌ಎಕ್ಯೂ ಗುಣಮಟ್ಟದ ಸೋಯಾಬಿನ್ ಉತ್ಪನ್ನವನ್ನು ಪ್ರತಿ ಕ್ವಿಂಟಾಲ್‌ಗೆ 5,708ರಂತೆ ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ಜಿಲ್ಲೆಯ ರೈತರು ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಿಕೊಂಡು ಯೋಜನೆಯ ಲಾಭ ಪಡೆಯಲು ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ತೆರೆಯುವ ಸೋಯಾಬಿನ್ ಖರೀದಿ ಕೇಂದ್ರಗಳಲ್ಲಿ ಉತ್ಪನ್ನದ ಗುಣಮಟ್ಟ ಪರಿಶೀಲಿಸಲು ಗ್ರೇಡರ್‌ಗಳನ್ನು ನೇಮಕ ಮಾಡಬೇಕು. ಅವರಿಗೆ ಎಫ್‌ಎಕ್ಯೂ ಗುಣಮಟ್ಟ ನಿರ್ಧರಿಸುವ ಕುರಿತು ತರಬೇತಿ ನೀಡಬೇಕು. ಪ್ರತಿ ರೈತರಿಂದ ಪ್ರತಿ ಎಕರೆಗೆ ಗರಿಷ್ಠ 5 ಕ್ವಿಂಟಾಲ್‌ನಂತೆ, ಒಬ್ಬ ರೈತರಿಂದ ಗರಿಷ್ಠ 25 ಕ್ವಿಂಟಾಲ್ ಸೋಯಾಬಿನ್ ಖರೀದಿಸಬೇಕು ಎಂದು ಸೂಚಿಸಿದರು.

ಬೆಂಬಲ ಬೆಲೆ ಯೋಜನೆಯ ಕುರಿತು ರೈತರಿಗೆ ವ್ಯಾಪಕ ಪ್ರಚಾರದ ಮೂಲಕ ಮಾಹಿತಿ ತಲುಪಿಸಬೇಕು. ಜಿಲ್ಲೆಯ ರೈತರು ಯೋಜನೆಯ ಪ್ರಯೋಜನ ಪಡೆಯಲು ಅನುಕೂಲವಾಗುವಂತೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ತಿಳಿಸಿದರು.

*80 ದಿನ ನೋಂದಣಿ, 90 ದಿನ ಖರೀದಿ ಅವಧಿ*

ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕಿ ಸುಧಾ ಆರ್. ಬಂಡಿ ಮಾತನಾಡಿ, ಕೇಂದ್ರ ಸರ್ಕಾರದ ಮಾರ್ಗಸೂಚಿ ಹಾಗೂ ಆದೇಶದನ್ವಯ ನ್ಯಾಷನಲ್ ಅಗ್ರಿಕಲ್ಚರಲ್ ಕೋ-ಆಪರೇಟಿವ್ ಮಾರ್ಕೆಟಿಂಗ್ ಫೆಡರೇಷನ್ (ನಾಫೆಡ್) ಮತ್ತು ರಾಷ್ಟ್ರೀಯ ಸಹಕಾರಿ ಗ್ರಾಹಕರ ಒಕ್ಕೂಟ (ಎನ್‌ಸಿಸಿಎಫ್) ಸಂಸ್ಥೆಗಳನ್ನು ಕೇಂದ್ರದ ಖರೀದಿ ಏಜೆನ್ಸಿಗಳನ್ನಾಗಿ ನೇಮಿಸಲಾಗಿದೆ. ಕರ್ನಾಟಕ ಸಹಕಾರ ಎಣ್ಣೆಬೀಜ ಬೆಳೆಗಾರರ ಮಹಾಮಂಡಳಿ ನಿಯಮಿತ (ಕೆಒಎಫ್), ಬೆಂಗಳೂರು, ಸಂಸ್ಥೆಯನ್ನು ರಾಜ್ಯಮಟ್ಟದ ಖರೀದಿ ಏಜೆನ್ಸಿಯನ್ನಾಗಿ ನೇಮಿಸಲಾಗಿದೆ ಎಂದು ವಿವರಿಸಿದರು.

ಸರ್ಕಾರದ ಆದೇಶದ ದಿನಾಂಕದಿಂದ ರೈತರ ನೋಂದಣಿಗೆ 80 ದಿನ ಹಾಗೂ ಸೋಯಾಬಿನ್ ಖರೀದಿಗೆ 90 ದಿನಗಳ ಕಾಲಾವಕಾಶ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯ ಜತೆಗೆ ಖರೀದಿಯನ್ನೂ ಆರಂಭಿಸಲು ಆದೇಶಿಸಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಗದಗ ಜಿಲ್ಲೆಯ 9 ಕಡೆಗಳಲ್ಲಿ ಸೋಯಾಬಿನ್ ಖರೀದಿ ಕೇಂದ್ರಗಳನ್ನು ತೆರೆಯಲು ನಿರ್ಧರಿಸಲಾಯಿತು.

## ಗದಗ-ಬೆಟಗೇರಿ: ಇಂದು ನೀರು ಪೂರೈಕೆ ವಿವರ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದ ವಿವಿಧ ಬಡಾವಣೆಗಳಲ್ಲಿ ಅ. 10ರಂದು ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ನೀರು ಪೂರೈಕೆಯಾಗುವ ಪ್ರದೇಶಗಳು**

ವಾರ್ಡ್ ನಂ. 8, 9 ಮತ್ತು 10ರ 247 ಹೆಲ್ತ್ ಕ್ಯಾಂಪ್ ಲೈನ್, ನವೋದಯ ಆಫೀಸ್ ಲೈನ್, ಮಸೂತಿ ಲೈನ್, ಮಜ್ಜಿಗೆ ಓಣಿ, ಕಬಾಡಿ ರಸ್ತೆ, ತೆಗ್ಗಿನ ಪೇಟೆ, ಪಿ.ಬಿ. ರಸ್ತೆ ಕಲಬುರ್ಗಿ ಓಣಿ, ಕರಿಸಿದ್ದಿಮಠ ಲೈನ್, ಕಂಗೋರಿ ಓಣಿ, ಹದ್ದನಸರ್ ಲೈನ್, ಶಿರಹಟ್ಟಿ ಓಣಿ ಹಾಗೂ ಬೋರೆಗಾರ ಓಣಿ.

ವಾರ್ಡ್ ನಂ. 29ರ ಡಂಬಳ ಇವರ ಲೈನ್, ಮಸೂತಿ ಕೆಳಗಿನ ಮತ್ತು ಮೇಲಿನ ಭಾಗ.

ವಾರ್ಡ್ ನಂ. 27ರ ಕೆ.ಎಚ್. ಪಾಟೀಲ ಬಡಾವಣೆ ಹಾಗೂ ವೀರನಾರಾಯಣ ಬಡಾವಣೆ.

ವಾರ್ಡ್ ನಂ. 21 ಮತ್ತು 23ರ ಕಮತರ ಪ್ಲಾಟ್, ಮುನವಳ್ಳಿ ಪ್ಲಾಟ್ ಲೈನ್, ಯಲಿಗಾರ ಭಾಗ 1 ಮತ್ತು 2, ಗುರುಬಸವ ಲೈನ್, ಗೆಳೆಯರ ಬಳಗ ಹೊಸ ಲೈನ್, ಕರಿಯಪ್ಪ ಲೈನ್, ನಾಗಪ್ಪನಕಟ್ಟಿ ಲೈನ್, ಪಾಟೀಲರ ಲೈನ್, ಮಡಿವಾಳರ ಲೈನ್ ಹಾಗೂ ಜಂತ್ಲಿಯವರ ಲೈನ್.

ವಾರ್ಡ್ ನಂ. 16, 18 ಮತ್ತು 29ರ ಮಡಿವಾಳ ದೇವಸ್ಥಾನ ಲೈನ್, ಕಂಬಾರ ಓಣಿ ಭಾಗ 1 ಮತ್ತು 2, ಬಾಗಲಕೋಟಿ ಇವರ ಲೈನ್, ಅಂಬೇಡ್ಕರ್ ನಗರ, ಕೋನೆರಿ ಹೊಂಡದ ಹೊಸ ಲೈನ್, ಡೋರಗಲ್ಲಿ ಲೈನ್ ಹಾಗೂ ಹನುಮಂತ ದೇವರ ಗುಡಿ ಲೈನ್.

ವಾರ್ಡ್ ನಂ. 22ರ ಗಂಗಿಮಡಿ ನಿಂಗಪ್ಪರ ಲೈನ್, ಸಪಾರಿಯವರ ಲೈನ್, ರಿಯಾಜ್ ದೇಸಾಯಿ ಕಾಂಬಳೆ ಇವರ ಲೈನ್, ಉಗ್ಗಿಯರ್ ಲೈನ್, ಸ್ವಾಮಿಯರ್ ಲೈನ್ ಹಾಗೂ ಗಾರ್ಡನ್ ಸಮೀಪದ ಪಿ.ಸಿ.ಸಿ. ಲೈನ್.

ವಾರ್ಡ್ ನಂ. 34ರ ನಂದೀಶ್ವರ ನಗರ ಲೈನ್, ವಾರ್ಡ್ 33ರ ಆರ್.ಕೆ. ನಗರ, ರೆಡ್ಡಿ ಖಾನಾವಳಿ ಲೈನ್, ದೇಸಾಯಿ ಡಾಕ್ಟರ್ ಲೈನ್ ಹಾಗೂ ಹನುಮಂತ ಗುಡಿಯ ಹಿಂದಿನ ಭಾಗದ ಲೈನ್. ವಾರ್ಡ್ ನಂ. 35ರ ವೀರೇಶ್ವರ ನಗರ ಲೈನ್‌ಗೂ ನೀರು ಪೂರೈಕೆಯಾಗಲಿದೆ.

ತಾಂತ್ರಿಕ ಕಾರಣಗಳಿಂದ ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಮನವಿ ಮಾಡಿದ್ದಾರೆ.

# ಅ. 23ರಂದು ಮತದಾನ, ಗದಗದಲ್ಲಿ 21,594 ಮತದಾರರು
# ಪಶ್ಚಿಮ ಪದವೀಧರ ಕ್ಷೇತ್ರಕ್ಕೆ 14 ಅಭ್ಯರ್ಥಿಗಳು

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಕರ್ನಾಟಕ ವಿಧಾನ ಪರಿಷತ್ತಿನ ಪಶ್ಚಿಮ ಪದವೀಧರರ ಕ್ಷೇತ್ರದ ಚುನಾವಣೆಗೆ ಅಂತಿಮವಾಗಿ 14 ಅಭ್ಯರ್ಥಿಗಳು ಕಣದಲ್ಲಿದ್ದು, ಅಕ್ಟೋಬರ್ 23ರಂದು ಮತದಾನ ನಡೆಯಲಿದೆ. ಧಾರವಾಡ, ಗದಗ, ಹಾವೇರಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳ ವ್ಯಾಪ್ತಿಯಲ್ಲಿ ಒಟ್ಟು 97,398 ಮತದಾರರಿದ್ದು, ಚುನಾವಣೆಗಾಗಿ 137 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ ಎಂದು ಚುನಾವಣಾಧಿಕಾರಿ ಹಾಗೂ ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಕೆ.ಎಂ. ಜಾನಕಿ ತಿಳಿಸಿದರು.

ಶುಕ್ರವಾರ ಧಾರವಾಡ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸೆಪ್ಟೆಂಬರ್ 29ರಿಂದ ಅಕ್ಟೋಬರ್ 6ರವರೆಗೆ 18 ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದರು. ಅಕ್ಟೋಬರ್ 9ರಂದು ನಾಲ್ವರು ಅಭ್ಯರ್ಥಿಗಳು ನಾಮಪತ್ರ ಹಿಂಪಡೆದ ಹಿನ್ನೆಲೆಯಲ್ಲಿ ಅಂತಿಮವಾಗಿ 14 ಅಭ್ಯರ್ಥಿಗಳು ಚುನಾವಣಾ ಕಣದಲ್ಲಿದ್ದಾರೆ ಎಂದರು.



ಕಣದಲ್ಲಿರುವ ಪ್ರಮುಖ ಅಭ್ಯರ್ಥಿಗಳಲ್ಲಿ ಕಾಂಗ್ರೆಸ್‌ನ ಮೋಹನ ಲಿಂಬಿಕಾಯಿ ಹಾಗೂ ಬಿಜೆಪಿಯ ಸಂಕನೂರ ಎಸ್.ವಿ. ಸೇರಿದಂತೆ ನಿಶಾಂತ ಬಂಕಾಪೂರ, ಮಲ್ಲಿಕಾರ್ಜುನ ಚನ್ನಪ್ಪ ಗಂಗಾಧರ, ತಳವಾರ ಶಿವಕುಮಾರ, ಕಾಂತಕುಮಾರ್, ಬಸವರಾಜ ಕೊಟಗಿ, ಜೀಶಾನ ಅಹ್ಮದಖಾನ ಪಠಾಣ, ಸಂತೋಷ ವೆರ್ಣೇಕರ, ಉಮೇಶ ದೈವಜ್ಞ, ಕೃಷ್ಣ, ಜಿಶಾನ ಸಿರಸಂಗಿ ಹಾಗೂ ಅಬ್ದುಲ ಮುನ್ನನ ಸೇರಿದಂತೆ 14 ಅಭ್ಯರ್ಥಿಗಳಿದ್ದಾರೆ.

ನಾಲ್ಕು ಜಿಲ್ಲೆಗಳಲ್ಲಿ 128 ಮುಖ್ಯ ಮತಗಟ್ಟೆಗಳು ಹಾಗೂ 9 ಹೆಚ್ಚುವರಿ ಮತಗಟ್ಟೆಗಳು ಸೇರಿ ಒಟ್ಟು 137 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಮತಗಟ್ಟೆಗಳಲ್ಲಿ ಅಗತ್ಯ ಮೂಲಸೌಕರ್ಯ ಕಲ್ಪಿಸುವುದರ ಜತೆಗೆ ಚುನಾವಣಾ ಸಿಬ್ಬಂದಿ ನೇಮಕ ಮತ್ತು ತರಬೇತಿಗೆ ಸಿದ್ಧತೆ ಮಾಡಿಕೊಳ್ಳಲಾಗಿದೆ.

**ನೀತಿ ಸಂಹಿತೆ ಜಾರಿಗೆ ವಿಶೇಷ ತಂಡಗಳು:** ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿಗೆ ಸೆಕ್ಟರ್ ಅಧಿಕಾರಿಗಳು, ಫ್ಲೈಯಿಂಗ್ ಸ್ಕ್ವಾಡ್, ವಿಡಿಯೊ ಸರ್ವೇಲೆನ್ಸ್ ತಂಡ, ವಿಡಿಯೊ ವೀಕ್ಷಣಾ ತಂಡ, ಮಾಧ್ಯಮ ಮೇಲ್ವಿಚಾರಣಾ ಸಮಿತಿ ಹಾಗೂ ದೂರುಗಳ ಮೇಲ್ವಿಚಾರಣಾ ಘಟಕಗಳನ್ನು ರಚಿಸಲಾಗಿದೆ.

### ಜಿಲ್ಲಾವಾರು ಮತದಾರರ ವಿವರ

ಧಾರವಾಡ ಜಿಲ್ಲೆಯಲ್ಲಿ 35,117, ಗದಗ ಜಿಲ್ಲೆಯಲ್ಲಿ 21,594, ಹಾವೇರಿ ಜಿಲ್ಲೆಯಲ್ಲಿ 24,648 ಹಾಗೂ ಉತ್ತರ ಕನ್ನಡ ಜಿಲ್ಲೆಯಲ್ಲಿ 16,039 ಮತದಾರರಿದ್ದಾರೆ.
ಗದಗ ಜಿಲ್ಲೆಯಲ್ಲಿ 13,757 ಪುರುಷರು ಹಾಗೂ 7,837 ಮಹಿಳಾ ಪದವೀಧರ ಮತದಾರರಿದ್ದಾರೆ. ಧಾರವಾಡ ಜಿಲ್ಲೆಯಲ್ಲಿ 20,013 ಪುರುಷರು ಮತ್ತು 15,104 ಮಹಿಳೆಯರು, ಹಾವೇರಿ ಜಿಲ್ಲೆಯಲ್ಲಿ 15,547 ಪುರುಷರು ಹಾಗೂ 9,101 ಮಹಿಳೆಯರು, ಉತ್ತರ ಕನ್ನಡ ಜಿಲ್ಲೆಯಲ್ಲಿ 8,028 ಪುರುಷರು ಹಾಗೂ 8,011 ಮಹಿಳೆಯರು ಮತದಾರರ ಪಟ್ಟಿಯಲ್ಲಿದ್ದಾರೆ.

ಮತದಾನದ ದಿನ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಕ್ರಮ ಕೈಗೊಳ್ಳಲಾಗಿದ್ದು, ಚುನಾವಣಾ ಆಯೋಗದ ನಿರ್ದೇಶನದಂತೆ ಡ್ರೈ ಡೇ ಜಾರಿಗೂ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಾನಕಿ ತಿಳಿಸಿದರು.

ಚುನಾವಣೆ ಮತಪತ್ರಗಳ ಮೂಲಕ ನಡೆಯಲಿದ್ದು, ಈ ಚುನಾವಣೆಯಲ್ಲಿ ನೋಟಾ ಆಯ್ಕೆಗೆ ಅವಕಾಶವಿರುವುದಿಲ್ಲ. ಮತ ಎಣಿಕೆ ಕೇಂದ್ರ ಹಾಗೂ ಭದ್ರತಾ ಕೊಠಡಿಯನ್ನು ಧಾರವಾಡದ ಕೃಷಿ ವಿಶ್ವವಿದ್ಯಾಲಯದಲ್ಲಿ ಸ್ಥಾಪಿಸಲಾಗಿದೆ. ಚುನಾವಣೆಯನ್ನು ಶಾಂತಿಯುತವಾಗಿ, ನ್ಯಾಯಸಮ್ಮತವಾಗಿ ಹಾಗೂ ಪಾರದರ್ಶಕವಾಗಿ ನಡೆಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ಅವರು ಹೇಳಿದರು.

## ಆರೋಪಿಗಳ ಬಂಧನಕ್ಕೆ ಪಟ್ಟು, ಪೊಲೀಸರೊಂದಿಗೆ ವಾಗ್ವಾದ
## ಲಕ್ಷ್ಮೇಶ್ವರದಲ್ಲಿ ಯುವಕನ ಮೇಲೆ ಹಲ್ಲೆ ಆರೋಪ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬಾಲಕಿಗೆ ಬೈಕ್ ಡಿಕ್ಕಿ ಹೊಡೆದ ವಿಚಾರಕ್ಕೆ ಸಂಬಂಧಿಸಿದಂತೆ ಯುವಕನ ಮೇಲೆ ಹಲ್ಲೆ ನಡೆಸಲಾಗಿದೆ ಎಂಬ ಆರೋಪ ಪಟ್ಟಣದಲ್ಲಿ ಉದ್ವಿಗ್ನ ವಾತಾವರಣಕ್ಕೆ ಕಾರಣವಾಗಿದೆ. ಹಲ್ಲೆ ನಡೆಸಿದವರನ್ನು ಕೂಡಲೇ ಬಂಧಿಸಬೇಕೆಂದು ಆಗ್ರಹಿಸಿ ಹಿಂದೂ ಸಂಘಟನೆಗಳ ನೂರಾರು ಕಾರ್ಯಕರ್ತರು ಶುಕ್ರವಾರ ರಾತ್ರಿ ಪೊಲೀಸ್ ಠಾಣೆ ಎದುರು ಪ್ರತಿಭಟನೆ ನಡೆಸಿದರು.

ಪಟ್ಟಣದ ದೂಧನಾನಾ ದರ್ಗಾ ಬಳಿ ಘಟನೆ ನಡೆದಿದ್ದು, ನಾಗರಾಜ್ ಮಲ್ಲೇಶಪ್ಪ ಕಾಳೆ ಎಂಬ ಯುವಕ ಬೈಕ್‌ನಲ್ಲಿ ತೆರಳುತ್ತಿದ್ದಾಗ ಬಾಲಕಿಯೊಬ್ಬಳು ಅಡ್ಡವಾಗಿ ಓಡಿ ಬಂದಿದ್ದಾಳೆ ಎನ್ನಲಾಗಿದೆ. ಈ ವಿಚಾರವಾಗಿ ದರ್ಗಾಕ್ಕೆ ಬೇರೆ ಊರುಗಳಿಂದ ಬಂದಿದ್ದ ಏಳೆಂಟು ಜನರು ನಾಗರಾಜ್ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಲಾಗಿದೆ.

ಹಲ್ಲೆಯಿಂದ ಗಾಯಗೊಂಡ ನಾಗರಾಜ್ ಅವರನ್ನು ಹಿಂದೂ ಸಂಘಟನೆಗಳ ಕಾರ್ಯಕರ್ತರು ಲಕ್ಷ್ಮೇಶ್ವರ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ಕೊಡಿಸಲು ನೆರವಾದರು. ಘಟನೆ ತಿಳಿಯುತ್ತಿದ್ದಂತೆ ಆಕ್ರೋಶಗೊಂಡ ಕಾರ್ಯಕರ್ತರು, ಪೊಲೀಸ್ ಠಾಣೆ ಪಕ್ಕದ ಇಟ್ಟಿಗೇರಿ ದಂಡೆಯ ಮೇಲೆ ಮೌನ ಪ್ರತಿಭಟನೆ ಆರಂಭಿಸಿದರು. ಬಳಿಕ ಪೊಲೀಸ್ ಠಾಣೆ ಎದುರೂ ಜಮಾಯಿಸಿ ಆರೋಪಿಗಳನ್ನು ತಕ್ಷಣ ಬಂಧಿಸುವಂತೆ ಒತ್ತಾಯಿಸಿದರು.

ಘಟನೆಗೆ ಕಾರಣ ಏನೇ ಇದ್ದರೂ ಕಾನೂನು ಕೈಗೆತ್ತಿಕೊಂಡವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಇಂತಹ ಘಟನೆಗಳಿಂದ ಸಾರ್ವಜನಿಕರಲ್ಲಿ ಆತಂಕ ಸೃಷ್ಟಿಯಾಗದಂತೆ ಪೊಲೀಸರು ಸೂಕ್ತ ಕ್ರಮ ವಹಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಈ ವೇಳೆ ಪೊಲೀಸರು ಹಾಗೂ ಪ್ರತಿಭಟನಾಕಾರರ ನಡುವೆ ತೀವ್ರ ವಾಗ್ವಾದ ನಡೆಯಿತು. ಆರೋಪಿಗಳನ್ನು ಕೂಡಲೇ ಬಂಧಿಸಬೇಕೆಂದು ಕಾರ್ಯಕರ್ತರು ಪಟ್ಟು ಹಿಡಿದ ಹಿನ್ನೆಲೆಯಲ್ಲಿ ಕೆಲಕಾಲ ಪೊಲೀಸ್ ಠಾಣೆ ಎದುರು ಬಿಗುವಿನ ವಾತಾವರಣ ನಿರ್ಮಾಣವಾಯಿತು. ತಡರಾತ್ರಿಯವರೆಗೂ ಪ್ರತಿಭಟನೆ ಮುಂದುವರಿಯಿತು.

ಈ ಸಂದರ್ಭದಲ್ಲಿ ಹಿಂದೂ ಮುಖಂಡರಾದ ಮಹೇಶ ಕಲಘಟಗಿ, ಮಂಜುನಾಥ ಮಾಗಡಿ, ನಾಗರಾಜ ಚಿಂಚಲಿ, ಈರಣ್ಣ ಪೂಜಾರ, ಹರೀಶ ಗೋಸಾವಿ, ಪ್ರಕಾಶ ಕಮಡೊಳ್ಳಿ, ಅಮೀತ ಗುಡಗೇರಿ, ಅಶೋಕ ಸೂರಣಗಿ, ಹೇಮಣ್ಣ ಬುರಡಿ, ಭರಮಣ್ಣ ಗೌಳಿ, ಈರಣ್ಣ ಹುಲಕೋಟಿ, ಪ್ರಕಾಶ ಜಾದವ, ನೀಲಕಂಠ ಕಣವಿ ಹಾಗೂ ಮೈಲಾರಪ್ಪ ಕಾಳೆ ಸೇರಿದಂತೆ ಹಿಂದೂಪರ ಸಂಘಟನೆಗಳ ಕಾರ್ಯಕರ್ತರು ಉಪಸ್ಥಿತರಿದ್ದರು.

ಘಟನೆ ಲಕ್ಷ್ಮೇಶ್ವರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದ್ದು, ಹಲ್ಲೆ ಆರೋಪದ ಕುರಿತು ಪೊಲೀಸರ ತನಿಖೆ ಹಾಗೂ ಮುಂದಿನ ಕ್ರಮಗಳ ಬಗ್ಗೆ ಅಧಿಕೃತ ಮಾಹಿತಿ ಲಭ್ಯವಾಗಬೇಕಿದೆ.

## ಕೊಪ್ಪಳದಲ್ಲಿ ‘ಕಾಲೇಜು ರಂಗ’ ಪ್ರಾಯೋಗಿಕ ಪತ್ರಿಕೆ ಬಿಡುಗಡೆ
### ಮಹಿಳೆಯರೂ ಮಾಧ್ಯಮ ಲೋಕಕ್ಕೆ ಬರಲಿ



**ವಿಜಯಸಾಕ್ಷಿ ಸುದ್ದಿ,ಕೊಪ್ಪಳ**

ಬದಲಾಗುತ್ತಿರುವ ಮಾಧ್ಯಮ ಲೋಕದಲ್ಲಿ ಮಹಿಳೆಯರೂ ಹೆಚ್ಚಿನ ಸಂಖ್ಯೆಯಲ್ಲಿ ಪ್ರವೇಶಿಸಿ ತಮ್ಮ ಸಾಮರ್ಥ್ಯ ಸಾಬೀತುಪಡಿಸಬೇಕು ಎಂದು ಪತ್ರಕರ್ತೆ ಹಾಗೂ ಚಲನಚಿತ್ರ ಅಕಾಡೆಮಿ ಸದಸ್ಯೆ ಸಾವಿತ್ರಿ ಮುಜುಂದಾರ್ ಹೇಳಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಶುಕ್ರವಾರ ಪತ್ರಿಕೋದ್ಯಮ ವಿಭಾಗ ಹಾಗೂ ಆಂತರಿಕ ಗುಣಮಟ್ಟ ಭರವಸಾ ಕೋಶದ ಸಹಯೋಗದಲ್ಲಿ ಆಯೋಜಿಸಿದ್ದ ವಿದ್ಯಾರ್ಥಿಗಳ ಪ್ರಾಯೋಗಿಕ ಪತ್ರಿಕೆ ‘ಕಾಲೇಜು ರಂಗ’ ಬಿಡುಗಡೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರು ಅಡುಗೆ ಮನೆಗೆ ಸೀಮಿತವಾಗಿದ್ದ ಕಾಲ ಈಗಿಲ್ಲ. ಎಲ್ಲ ಕ್ಷೇತ್ರಗಳಲ್ಲೂ ಮಹಿಳೆಯರು ಮುಂಚೂಣಿಯಲ್ಲಿದ್ದಾರೆ. ಯಾವುದೇ ಸವಾಲು ಎದುರಾದರೂ ಧೈರ್ಯದಿಂದ ಎದುರಿಸಿ ಮುನ್ನಡೆಯಬೇಕು ಎಂದು ಕರೆ ನೀಡಿದರು.

ಹಿರಿಯ ಪತ್ರಕರ್ತ ಪ್ರಮೋದ್ ಕುಲಕರ್ಣಿ ಮಾತನಾಡಿ, ತರಗತಿಯ ಪಾಠಕ್ಕೂ ಕ್ಷೇತ್ರದ ಅನುಭವಕ್ಕೂ ವ್ಯತ್ಯಾಸವಿದೆ. ಪತ್ರಿಕೋದ್ಯಮದಲ್ಲಿ ಪ್ರಾಯೋಗಿಕ ಕಲಿಕೆ ಅತ್ಯಂತ ಮುಖ್ಯ. ಪಾಠದ ಜತೆಗೆ ಪ್ರಾಯೋಗಿಕ ಚಟುವಟಿಕೆಗಳಿಗೆ ಒತ್ತು ನೀಡಿದಾಗ ಮಾತ್ರ ವಿದ್ಯಾರ್ಥಿಗಳಿಂದ ಇಂತಹ ಪತ್ರಿಕೆ ಹೊರತರಲು ಸಾಧ್ಯ ಎಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ. ಗಣಪತಿ ಕೆ. ಲಮಾಣಿ ಮಾತನಾಡಿ, ಪತ್ರಿಕೋದ್ಯಮ ವಿಭಾಗದ ಚಟುವಟಿಕೆಗಳು ಹೆಚ್ಚು ಕ್ರಿಯಾಶೀಲವಾಗಿವೆ. ವಿಭಾಗಕ್ಕೆ ಕಾಲೇಜಿನಿಂದ ಅಗತ್ಯ ಪ್ರೋತ್ಸಾಹ ನೀಡಲಾಗುತ್ತಿದ್ದು, ಶೀಘ್ರದಲ್ಲೇ ಪತ್ರಿಕೋದ್ಯಮ ಪ್ರಯೋಗಾಲಯ ಆರಂಭಿಸಲಾಗುವುದು ಎಂದು ತಿಳಿಸಿದರು.

ಆಂತರಿಕ ಗುಣಮಟ್ಟ ಭರವಸಾ ಕೋಶದ ಸಂಚಾಲಕಿ ಡಾ. ಶುಭಾ ಮಾತನಾಡಿ, ಈ ಭಾಗದಲ್ಲಿ ಪತ್ರಿಕೋದ್ಯಮ ಕೋರ್ಸ್ ಆರಂಭಿಸಿರುವುದು ಶ್ಲಾಘನೀಯ. ವಿದ್ಯಾರ್ಥಿಗಳಿಗೆ ಆರಂಭದಿಂದಲೇ ಪತ್ರಿಕೋದ್ಯಮದ ಕೌಶಲಗಳನ್ನು ಕಲಿಸುತ್ತಿರುವ ವಿಭಾಗದ ಕಾರ್ಯ ಅಭಿನಂದನಾರ್ಹ ಎಂದರು.

ಪತ್ರಿಕೋದ್ಯಮ ವಿಭಾಗದ ಉಪನ್ಯಾಸಕ ಬಸವರಾಜ ಕರುಗಲ್ ಪ್ರಾಸ್ತಾವಿಕವಾಗಿ ಮಾತನಾಡಿ, ‘ಕಾಲೇಜು ರಂಗ’ ಪ್ರಾಯೋಗಿಕ ಪತ್ರಿಕೆಯ ಉದ್ದೇಶ ಮತ್ತು ಹಿನ್ನೆಲೆ ವಿವರಿಸಿದರು.

ಸೌಭಾಗ್ಯ ನಿರೂಪಿಸಿದರು. ಸುಷ್ಮಿತಾ ಮತ್ತು ಅಕ್ಕಮಹಾದೇವಿ ಪ್ರಾರ್ಥಿಸಿದರು. ಹನುಮಂತಿ ಸ್ವಾಗತಿಸಿದರು. ದುರ್ಗಾ ವಂದಿಸಿದರು. ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥೆ ರಾಜ್ಮಾ ಸೇರಿದಂತೆ ಬೋಧಕ, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

### ಹೆಣ್ಮಕ್ಳೇ ಸ್ಟ್ರಾಂಗು ಗುರು

ಕಾಲೇಜಿನ ವಿವಿಧ ವಿಭಾಗಗಳ ಪೈಕಿ ಪತ್ರಿಕೋದ್ಯಮ ವಿಭಾಗ ಚಿಕ್ಕದಾಗಿದ್ದರೂ, ವಿದ್ಯಾರ್ಥಿನಿಯರ ಸಂಘಟನಾ ಚಾತುರ್ಯ ಹಾಗೂ ನಾಯಕತ್ವ ಗಮನ ಸೆಳೆಯಿತು. ಕಾರ್ಯಕ್ರಮದ ಬ್ಯಾನರ್ ಕಟ್ಟುವುದರಿಂದ ಹಿಡಿದು ಸಮಾರಂಭ ಮುಗಿದ ಬಳಿಕ ಕುರ್ಚಿಗಳನ್ನು ವ್ಯವಸ್ಥಿತವಾಗಿ ಜೋಡಿಸುವವರೆಗೆ ಎಲ್ಲ ಕೆಲಸಗಳಲ್ಲೂ ವಿದ್ಯಾರ್ಥಿನಿಯರು ತೊಡಗಿಸಿಕೊಂಡು, ‘ಹೆಣ್ಮಕ್ಳೇ ಸ್ಟ್ರಾಂಗು ಗುರು’ ಎಂಬ ಮಾತಿಗೆ ಸಾಕ್ಷಿಯಾದರು.

## ಮಹಾರಾಜಾ ಗಣಪತಿಗೆ ಭವ್ಯ ಬೀಳ್ಕೊಡುಗೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಹಾವಳಿ ಹನುಮಂತದೇವರ ದೇವಸ್ಥಾನದ ಸಮೀಪ ಪ್ರತಿಷ್ಠಾಪಿಸಲಾಗಿದ್ದ, ‘ಲಕ್ಷ್ಮೇಶ್ವರದ ಮಹಾರಾಜಾ’ ಎಂದೇ ಖ್ಯಾತಿ ಪಡೆದ ಹಿಂದೂ ಮಹಾಗಣಪತಿ ಮೂರ್ತಿಯ ವಿಸರ್ಜನೆ ಗುರುವಾರ ಸಂಜೆ ಅದ್ದೂರಿಯಾಗಿ ನೆರವೇರಿತು. ಗಣೇಶನ ಅಂತಿಮ ದರ್ಶನ ಹಾಗೂ ವಿಸರ್ಜನೆ ಮೆರವಣಿಗೆಯಲ್ಲಿ ಪಾಲ್ಗೊಳ್ಳಲು ಜಿಲ್ಲೆಯ ವಿವಿಧ ಭಾಗಗಳಿಂದ ಸಾವಿರಾರು ಭಕ್ತರು ಹರಿದುಬಂದಿದ್ದರು.

ಸಂಜೆ ದೇವಸ್ಥಾನದ ಬಳಿಯಿಂದ ಆರಂಭವಾದ ಮೆರವಣಿಗೆ ವಿದ್ಯಾರಣ್ಯ ವೃತ್ತ, ಪಂಪ ವೃತ್ತ, ಕೋರ್ಟ್ ಸರ್ಕಲ್, ಭರಮದೇವರ ವೃತ್ತ ಹಾಗೂ ಪಾದಗಟ್ಟಿ ಮಾರ್ಗವಾಗಿ ಸಾಗಿತು. ಡಿಜೆ ಸಂಗೀತದ ಅಬ್ಬರಕ್ಕೆ ಯುವಕರು ಹೆಜ್ಜೆ ಹಾಕಿದರೆ, ಗಣಪತಿ ಬಪ್ಪಾ ಮೋರಯಾ ಎಂಬ ಜಯಘೋಷಗಳ ನಡುವೆ ಭಕ್ತರು ಉತ್ಸವದಲ್ಲಿ ಪಾಲ್ಗೊಂಡರು. ಮಹಿಳೆಯರು ಹಾಗೂ ಯುವತಿಯರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದು ವಿಶೇಷವಾಗಿತ್ತು.



ಅಗಸ್ತ್ಯತೀರ್ಥ ಬಾವಿಯಲ್ಲಿ ಬೃಹತ್ ಗಣೇಶ ಮೂರ್ತಿಯ ವಿಸರ್ಜನೆ ನೆರವೇರಿಸಲಾಯಿತು. ಮೆರವಣಿಗೆಯುದ್ದಕ್ಕೂ ರಸ್ತೆಗಳು ಜನರಿಂದ ತುಂಬಿ ತುಳುಕುತ್ತಿದ್ದವು.

ಗಣೇಶ ಮೂರ್ತಿ ವಿಸರ್ಜನೆ ವೇಳೆ ಸಾವಿರಾರು ಜನರು ಸೇರುವ ನಿರೀಕ್ಷೆಯ ಹಿನ್ನೆಲೆಯಲ್ಲಿ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶವಾಗದಂತೆ ಪೊಲೀಸ್ ಇಲಾಖೆ ವ್ಯಾಪಕ ಭದ್ರತಾ ವ್ಯವಸ್ಥೆ ಕೈಗೊಂಡಿತ್ತು. ವಿವಿಧೆಡೆಗಳಿಂದ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು.

ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್.ಎನ್. ಅವರ ಮಾರ್ಗದರ್ಶನದಲ್ಲಿ ಡಿಎಸ್‌ಪಿ, ಸಿಪಿಐ, ಪಿಎಸ್‌ಐ, ಎಎಸ್‌ಐ, ಹೆಡ್‌ಕಾನ್ಸ್‌ಟೇಬಲ್‌ಗಳು ಸೇರಿದಂತೆ ಕೆಎಸ್‌ಆರ್‌ಪಿ ಹಾಗೂ ಡಿಎಆರ್ ತಂಡಗಳು ಬಂದೋಬಸ್ತ್‌ನಲ್ಲಿ ಪಾಲ್ಗೊಂಡಿದ್ದವು. ಡಿಎಸ್‌ಪಿ ಮುರ್ತುಜಾ ಖಾದ್ರಿ ಸೇರಿದಂತೆ ಹಿರಿಯ ಪೊಲೀಸ್ ಅಧಿಕಾರಿಗಳು ಸ್ಥಳದಲ್ಲಿದ್ದು ಭದ್ರತಾ ವ್ಯವಸ್ಥೆಯ ಮೇಲ್ವಿಚಾರಣೆ ನಡೆಸಿದರು.

### 2026-27ನೇ ಸಾಲಿನ ಅಧ್ಯಕ್ಷರು, ಉಪಾಧ್ಯಕ್ಷರು ಸೇರಿ ಪದಾಧಿಕಾರಿಗಳು ಅವಿರೋಧ ಆಯ್ಕೆ

# ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಗೆ ನೂತನ ಪದಾಧಿಕಾರಿಗಳ ಆಯ್ಕೆ









**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ 2026–27ನೇ ಸಾಲಿನ ನೂತನ ಪದಾಧಿಕಾರಿಗಳು ಅಕ್ಟೋಬರ್ 6ರಂದು ನಡೆದ ಸಂಸ್ಥೆಯ ಆಡಳಿತ ಮಂಡಳಿ ಸಭೆಯಲ್ಲಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಸಂಸ್ಥೆಯ ಅಧ್ಯಕ್ಷರಾಗಿ ಡಾ. ಜಯದೇವ ಎಂ. ಮೆಣಸಗಿ, ಪ್ರಥಮ ಉಪಾಧ್ಯಕ್ಷರಾಗಿ ಅರವಿಂದ ವಿ. ಪಟೇಲ್, ದ್ವಿತೀಯ ಉಪಾಧ್ಯಕ್ಷರಾಗಿ ಪ್ರಕಾಶ ಎಸ್. ಉಗಲಾಟದ, ತೃತೀಯ ಉಪಾಧ್ಯಕ್ಷರಾಗಿ ಶಿವಯ್ಯ ರಾಚಯ್ಯ ನಾಲತ್ವಾಡಮಠ, ಸಹ ಗೌರವ ಕಾರ್ಯದರ್ಶಿಗಳಾಗಿ ರಾಜಣ್ಣ ಬಸಣ್ಣ ಮಲ್ಲಾಡದ ಹಾಗೂ ಅರವಿಂದ ಎಸ್. ಕಾಮತ ಮತ್ತು ಕೋಶಾಧ್ಯಕ್ಷರಾಗಿ ಮಂಜುನಾಥ ವಿ. ವೀರಲಿಂಗಯ್ಯನಮಠ ಆಯ್ಕೆಯಾಗಿದ್ದಾರೆ.

**ಅಧ್ಯಕ್ಷರು: ಡಾ. ಜಯದೇವ ಎಂ. ಮೆಣಸಗಿ**

ಗದಗ ನಗರದವರಾದ ಡಾ. ಜಯದೇವ ಎಂ. ಮೆಣಸಗಿ ಅವರು ದಿವಂಗತ ಮೈಲಾರಪ್ಪ ಮೆಣಸಗಿ ಹಾಗೂ ಅನ್ನಪೂರ್ಣ ಅವರ ಪುತ್ರ. 1968ರ ಅಕ್ಟೋಬರ್ 24ರಂದು ಜನಿಸಿದ ಅವರು, ಗದಗದ ಮುನ್ಸಿಪಲ್ ಹೈಸ್ಕೂಲ್‌ನಲ್ಲಿ ಪ್ರಾಥಮಿಕ ಶಿಕ್ಷಣ ಪಡೆದು, ಎ.ಎಸ್.ಎಸ್. ಕಾಮರ್ಸ್ ಕಾಲೇಜಿನಲ್ಲಿ ಬಿ.ಕಾಂ. ಪದವಿ ಹಾಗೂ ಎಂ.ಎ. ಪದವಿ ಪಡೆದಿದ್ದಾರೆ.

ತಂದೆಯವರೊಂದಿಗೆ 1973ರಲ್ಲಿ ಶ್ರೀ ಶಿವಕುಮಾರ ಏಜೆನ್ಸಿ ಹಾಗೂ ವಿದ್ಯಾನಿಧಿ ಪ್ರಕಾಶನ ಸಂಸ್ಥೆಗಳನ್ನು ಆರಂಭಿಸಿ, ಶೈಕ್ಷಣಿಕ ಪುಸ್ತಕಗಳ ಪ್ರಕಾಶನ, ಮುದ್ರಣ, ಪತ್ರಿಕೆ ಹಾಗೂ ಪುಸ್ತಕ ಸಂಪಾದನೆ ಕ್ಷೇತ್ರಗಳಲ್ಲಿ ತೊಡಗಿಸಿಕೊಂಡಿದ್ದಾರೆ. ವ್ಯಾಪಾರದ ಜತೆಗೆ ಸಾಹಿತ್ಯ, ಶಿಕ್ಷಣ ಮತ್ತು ಸಾಮಾಜಿಕ ಕ್ಷೇತ್ರಗಳಲ್ಲಿಯೂ ಸೇವೆ ಸಲ್ಲಿಸಿದ್ದಾರೆ.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ ಆಡಳಿತ ಮಂಡಳಿ ಸದಸ್ಯ, ಕೋಶಾಧ್ಯಕ್ಷ, ಗೌರವ ಕಾರ್ಯದರ್ಶಿ ಹಾಗೂ ಉಪಾಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದಾರೆ. ಗದಗ ಉತ್ಸವ–2019ರ ಕಾರ್ಯದರ್ಶಿಯಾಗಿ, 76ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಪುಸ್ತಕ ಮಳಿಗೆ ಸಮಿತಿ ಅಧ್ಯಕ್ಷರಾಗಿ, ದಿನದರ್ಶಿಕೆ ಹಾಗೂ ಪುಸ್ತಕ ಪ್ರಕಾಶನ ಸಮಿತಿಗಳ ಸಂಚಾಲಕರಾಗಿಯೂ ಸೇವೆ ಸಲ್ಲಿಸಿದ್ದಾರೆ.

2017ರಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರದಿಂದ ಅತ್ಯುತ್ತಮ ಪ್ರಕಾಶನ ಪ್ರಶಸ್ತಿ ಸೇರಿದಂತೆ ವಿವಿಧ ಪ್ರಶಸ್ತಿ, ಪುರಸ್ಕಾರಗಳಿಗೆ ಭಾಜನರಾಗಿದ್ದಾರೆ. ಮೈಲಾರಪ್ಪ ಮೆಣಸಗಿ ಮೆಮೋರಿಯಲ್ ಟ್ರಸ್ಟ್ ಸಮೂಹ ಶಿಕ್ಷಣ ಸಂಸ್ಥೆಗಳ ಕಾರ್ಯಾಧ್ಯಕ್ಷರಾಗಿ, ವಿವಿಧ ದೇವಸ್ಥಾನಗಳ ಆಡಳಿತ ಮಂಡಳಿಗಳಲ್ಲಿ ಹಾಗೂ ಸಾಹಿತ್ಯ ಮತ್ತು ಶೈಕ್ಷಣಿಕ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸಿದ್ದಾರೆ. 18 ಕೃತಿಗಳನ್ನು ಸಂಪಾದಿಸಿರುವ ಅವರು, 2019–20ನೇ ಸಾಲಿನಲ್ಲಿ ಮೂರನೇ ಉಪಾಧ್ಯಕ್ಷರಾಗಿ, 2025–26ನೇ ಸಾಲಿನಲ್ಲಿ ದ್ವಿತೀಯ ಉಪಾಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದಾರೆ.

**ಪ್ರಥಮ ಉಪಾಧ್ಯಕ್ಷರು: ಅರವಿಂದ ವಿ. ಪಟೇಲ್**

ಗದಗದ ಉದ್ಯಮಿಯಾಗಿರುವ ಅರವಿಂದ ವಿ. ಪಟೇಲ್ ಅವರು ವ್ಹಿರಜಿ ಪಟೇಲ್ ಅವರ ಪುತ್ರ. 1967ರ ಆಗಸ್ಟ್ 26ರಂದು ಜನಿಸಿದ ಅವರು, ಗದಗದಲ್ಲಿ ಭಾರತ ಸಾ ಮಿಲ್ ವ್ಯಾಪಾರ ನಡೆಸುತ್ತಿದ್ದಾರೆ. ಗದಗ ಜಿಲ್ಲಾ ಸಾ ಮಿಲ್ ಮತ್ತು ಟಿಂಬರ್ ಮರ್ಚಂಟ್ಸ್ ಸಂಘದ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸುತ್ತಿದ್ದಾರೆ.

ಲಯನ್ಸ್ ಕ್ಲಬ್ ಗದಗ–ಬೆಟಗೇರಿಯ ಮಂಡಳಿ ಸದಸ್ಯರಾಗಿ, ಫೆಡರೇಷನ್ ಆಫ್ ಸಾ ಮಿಲ್ ಓನರ್ಸ್ ಸದಸ್ಯರಾಗಿ, ಫಾರೆಸ್ಟ್ ಕಾಂಟ್ರಾಕ್ಟರ್ಸ್ ಸಂಘದ ಸದಸ್ಯರಾಗಿ ಹಾಗೂ ಮಹಾವೀರ ಗೋಶಾಲೆಯ ಟ್ರಸ್ಟಿಯಾಗಿ ಕಾರ್ಯನಿರ್ವಹಿಸಿದ್ದಾರೆ. ಕನ್ನಡ ಸಾಹಿತ್ಯ ಸಂಸ್ಥೆಯೊಂದಿಗೂ ಗುರುತಿಸಿಕೊಂಡಿದ್ದಾರೆ.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ 2015ರಲ್ಲಿ ಗೌರವ ಕಾರ್ಯದರ್ಶಿಯಾಗಿ ಹಾಗೂ ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸಿರುವ ಅವರು, ಇದೀಗ 2026–27ನೇ ಸಾಲಿನ ಪ್ರಥಮ ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ.

**ದ್ವಿತೀಯ ಉಪಾಧ್ಯಕ್ಷರು: ಪ್ರಕಾಶ ಎಸ್. ಉಗಲಾಟದ**

ಗದಗ ಜಿಲ್ಲೆಯ ರೋಣ ತಾಲೂಕಿನ ಮಲ್ಲಾಪೂರ ಗ್ರಾಮದ ಉಗಲಾಟದ ಕುಟುಂಬದವರಾದ ಪ್ರಕಾಶ ಎಸ್. ಉಗಲಾಟದ ಅವರು ದಿವಂಗತ ಶಿವಮೂರ್ತಪ್ಪ ಹಾಗೂ ದಿವಂಗತ ಶಾಂತವ್ವ ಅವರ ಪುತ್ರ. 1973ರ ಆಗಸ್ಟ್ 22ರಂದು ಗದಗದಲ್ಲಿ ಜನಿಸಿದ ಅವರು, ವಾಣಿಜ್ಯ ಶಾಸ್ತ್ರದಲ್ಲಿ ಸ್ನಾತಕೋತ್ತರ ಪದವಿ ಪಡೆದಿದ್ದಾರೆ.

ಅಜ್ಜ ಹಾಗೂ ತಂದೆಯವರು ಆರಂಭಿಸಿದ ಮೆ. ಎಸ್.ಎ. ಉಗಲಾಟದ ಕಂಪನಿ ದಲಾಲಿ ವ್ಯವಹಾರದಲ್ಲಿ ತೊಡಗಿಸಿಕೊಂಡಿದ್ದಾರೆ. ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ ಸತತ ಎರಡು ವರ್ಷ ಸಹ ಗೌರವ ಕಾರ್ಯದರ್ಶಿಯಾಗಿ ಹಾಗೂ 2023–24ನೇ ಸಾಲಿನಲ್ಲಿ ಗೌರವ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದಾರೆ.

ದಲಾಲ ವರ್ತಕರ ಸಂಘದ ಕಾರ್ಯದರ್ಶಿ, ಜಗದ್ಗುರು ತೋಂಟದಾರ್ಯ ಕೋಶಾಧ್ಯಕ್ಷ, ಲಿಂಗಾಯತ ಪ್ರಗತಿಶೀಲ ಸಂಘದ ಕಾರ್ಯದರ್ಶಿ ಹಾಗೂ ಪಂಚಾಕ್ಷರ ಯುವಕ ಮಂಡಳದ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದಾರೆ. ರೋಟರಿ ಕ್ಲಬ್ ಗದಗ ಸೆಂಟ್ರಲ್‌ನಲ್ಲಿ ಕೋಶಾಧ್ಯಕ್ಷ, ಕಾರ್ಯದರ್ಶಿ ಹಾಗೂ 2013–14ನೇ ಸಾಲಿನಲ್ಲಿ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದಾರೆ. ಪ್ರಸ್ತುತ ರೋಟರಿ ಸೋಶಿಯಲ್ ಕಲ್ಚರಲ್ ಟ್ರಸ್ಟ್‌ನ ಕಾರ್ಯದರ್ಶಿಯಾಗಿದ್ದಾರೆ.

**ತೃತೀಯ ಉಪಾಧ್ಯಕ್ಷರು: ಶಿವಯ್ಯ ರಾಚಯ್ಯ ನಾಲತ್ವಾಡಮಠ**

ಗದಗದ ನಾಲತ್ವಾಡಮಠ ಮನೆತನದ ಶಿವಯ್ಯ ರಾಚಯ್ಯ ನಾಲತ್ವಾಡಮಠ ಅವರು 1954ರಲ್ಲಿ ಜನಿಸಿದರು. ಗದಗದ ವಿದ್ಯಾದಾನ ಗಂಡು ಮಕ್ಕಳ ಶಾಲೆಯಲ್ಲಿ ಎಲ್–ಎಸ್‌ಎಲ್‌ಸಿ ವರೆಗೆ ಶಿಕ್ಷಣ ಪಡೆದ ಅವರು, ಕುಟುಂಬದ ಕೃಷಿ ಮತ್ತು ವ್ಯಾಪಾರ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡರು.

ತಂದೆಯವರೊಂದಿಗೆ ಕೆ.ಎಸ್. ನಾಲತ್ವಾಡಮಠ ಹೆಸರಿನ ವ್ಯಾಪಾರದಲ್ಲಿ ತೊಡಗಿಸಿಕೊಂಡು, 1974ರಿಂದ ಮೆ. ಎಸ್.ಆರ್. ನಾಲತ್ವಾಡಮಠ ಹೆಸರಿನಲ್ಲಿ ವ್ಯಾಪಾರ ವಹಿವಾಟು ವಿಸ್ತರಿಸಿದರು. 1992ರಲ್ಲಿ ಗದಗ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಲ್ಲಿ ಮೆ. ವಿಜಯ ವಿನಾಯಕ ಹೆಸರಿನ ವ್ಯಾಪಾರ ಸಂಸ್ಥೆಯನ್ನು ಆರಂಭಿಸಿದರು.

ಬನ್ನಿ ಮಹಾಂಕಾಳಿ ದೇವಸ್ಥಾನದ ಟ್ರಸ್ಟ್ ಕಮಿಟಿ ಅಧ್ಯಕ್ಷರಾಗಿ, ಅನ್ನಸಂತರ್ಪಣಾ ಸಮಿತಿಯ ಕಾರ್ಯದರ್ಶಿಯಾಗಿ, ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯ ಹಾಗೂ ಕೋಶಾಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ. ತೋಂಟದಾರ್ಯ ಮಠದ ಜಾತ್ರಾ ಮಹೋತ್ಸವ ಸಮಿತಿ ಕಾರ್ಯದರ್ಶಿ ಹಾಗೂ ಮಠದ ಆಡಳಿತ ಮಂಡಳಿ ಸದಸ್ಯ, ಕೋಶಾಧ್ಯಕ್ಷ ಮತ್ತು ಉಪಾಧ್ಯಕ್ಷರಾಗಿಯೂ ಕಾರ್ಯನಿರ್ವಹಿಸಿದ್ದಾರೆ. ಪರ್ವತ ಮಲ್ಲೇಶ್ವರ ದೇವಸ್ಥಾನದ ಟ್ರಸ್ಟ್ ಕಮಿಟಿ ಕಾರ್ಯದರ್ಶಿ, ವೀರಶೈವ ರುದ್ರಭೂಮಿಯ ಕಾರ್ಯದರ್ಶಿ ಹಾಗೂ ಕೆಎಲ್‌ಇ ಸಂಸ್ಥೆಯ ಸದಸ್ಯರಾಗಿ ಸೇವೆ ಸಲ್ಲಿಸಿದ್ದಾರೆ.

**ಸಹ ಗೌರವ ಕಾರ್ಯದರ್ಶಿ: ರಾಜಣ್ಣ ಬಸಣ್ಣ ಮಲ್ಲಾಡದ**

ಗದಗದ ಮಲ್ಲಾಡದ ಕುಟುಂಬದ ರಾಜಣ್ಣ ಬಸಣ್ಣ ಮಲ್ಲಾಡದ ಅವರು 1975ರ ಜೂನ್ 7ರಂದು ಜನಿಸಿದರು. ಸೊಂಡೂರದ ಗೋರಪಡೆ ಶಾಲೆ, ಗದಗದ ವಿದ್ಯಾದಾನ ಗಂಡು ಮಕ್ಕಳ ಶಾಲೆ ಹಾಗೂ ಜಗದ್ಗುರು ತೋಂಟದಾರ್ಯ ಕಾಲೇಜಿನಲ್ಲಿ ಶಿಕ್ಷಣ ಪಡೆದಿದ್ದಾರೆ.

1995–96ರಲ್ಲಿ ತಂದೆಯವರೊಂದಿಗೆ ಮೆ. ಮಲ್ಲಾಡದ ಬ್ರದರ್ಸ್ ವ್ಯಾಪಾರ ಸಂಸ್ಥೆಯಲ್ಲಿ ತೊಡಗಿಸಿಕೊಂಡು ಅನುಭವ ಪಡೆದರು. ಪಂಚಾಚಾರ್ಯ ಕಾಲೇಜಿನ ಆಡಳಿತ ಮಂಡಳಿ ನಿರ್ದೇಶಕರಾಗಿ, ಪಂಚಾಚಾರ್ಯ ಮಾಂಗಲ್ಯ ಮಂದಿರದ ಸದಸ್ಯ ಹಾಗೂ ಕೋಶಾಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ.

2022–23ನೇ ಸಾಲಿನಲ್ಲಿ ಶಿವಾಜಿ ಜಯಂತಿ ಅಧ್ಯಕ್ಷರಾಗಿ, ಲಯನ್ಸ್ ಕ್ಲಬ್‌ನಲ್ಲಿ 2025–26ನೇ ಸಾಲಿನ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸಿದ್ದಾರೆ. ನಾಮಜೋಶಿ ರಸ್ತೆ ತರುಣ ವ್ಯಾಪಾರಸ್ಥರ ಸಂಘದ ಉಪಾಧ್ಯಕ್ಷ, ಗ್ರೇನ್ ಮಾರ್ಕೆಟ್ ವ್ಯಾಪಾರಸ್ಥರ ಸಂಘದ ಸದಸ್ಯ ಹಾಗೂ ಗಜಾನನ ಮಹಾಮಂಡಳದ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದಾರೆ.

**ಸಹ ಗೌರವ ಕಾರ್ಯದರ್ಶಿ: ಅರವಿಂದ ಎಸ್. ಕಾಮತ**

ಮೂಲತಃ ಉಡುಪಿ ಜಿಲ್ಲೆಯ ಕಾರ್ಕಳದ ಕಾಮತ ಮನೆತನದವರಾದ ಅರವಿಂದ ಎಸ್. ಕಾಮತ ಅವರು 1967ರ ಅಕ್ಟೋಬರ್ 3ರಂದು ಗದಗದಲ್ಲಿ ಜನಿಸಿದರು. ಗೌಂಟಿ ಸ್ಕೂಲ್, ವಿದ್ಯಾದಾನ ಸಮಿತಿಯ ಗಂಡು ಮಕ್ಕಳ ಶಾಲೆ ಹಾಗೂ ಜಗದ್ಗುರು ತೋಂಟದಾರ್ಯ ಕಾಲೇಜಿನಲ್ಲಿ ಶಿಕ್ಷಣ ಪಡೆದರು. ಧಾರವಾಡದ ಕೆ.ಎಚ್. ಕಬ್ಬೂರ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯಲ್ಲಿ ಆಟೋಮೊಬೈಲ್ ಎಂಜಿನಿಯರಿಂಗ್ ಡಿಪ್ಲೊಮಾ ಪೂರ್ಣಗೊಳಿಸಿದ್ದಾರೆ.

ತಂದೆಯವರು 1965ರಲ್ಲಿ ಆರಂಭಿಸಿದ ಮೆ. ಕಾಮತ ಬ್ರದರ್ಸ್ ಜನರಲ್ ಮರ್ಚಂಟ್ಸ್ ಸಂಸ್ಥೆಯಲ್ಲಿ ತಂದೆ, ಸಹೋದರ ಹಾಗೂ ಮಾಜಿ ಅಧ್ಯಕ್ಷ ದೇವದಾಸ ಎಸ್. ಕಾಮತ ಅವರೊಂದಿಗೆ ವ್ಯಾಪಾರದಲ್ಲಿ ತೊಡಗಿಸಿಕೊಂಡರು. 1992ರಲ್ಲಿ ಕಾಮತ ಏಜೆನ್ಸಿಯನ್ನು ಆರಂಭಿಸಿದರು.

ಗದಗ ಜಿಲ್ಲಾ ಗ್ರಾಹಕ ವಸ್ತುಗಳ ವಿತರಕರ ಸಂಘದ ನಿರ್ದೇಶಕರಾಗಿ ಹಾಗೂ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಆಜೀವ ಸದಸ್ಯ ಮತ್ತು ಆಡಳಿತ ಮಂಡಳಿ ಸದಸ್ಯರಾಗಿ ಸೇವೆ ಸಲ್ಲಿಸಿರುವ ಅವರು, ಇದೀಗ ಸಹ ಗೌರವ ಕಾರ್ಯದರ್ಶಿಯಾಗಿ ಆಯ್ಕೆಯಾಗಿದ್ದಾರೆ.

**ಕೋಶಾಧ್ಯಕ್ಷರು: ಮಂಜುನಾಥ ವಿ. ವೀರಲಿಂಗಯ್ಯನಮಠ**

ಗದಗದ ವೀರಲಿಂಗಯ್ಯನಮಠ ಕುಟುಂಬದ ಮಂಜುನಾಥ ವಿ. ವೀರಲಿಂಗಯ್ಯನಮಠ ಅವರು 1982ರ ಫೆಬ್ರವರಿ 13ರಂದು ಜನಿಸಿದರು. ಸರ್ವಮಂಗಳ ಹಾಗೂ ವೀರಭದ್ರಯ್ಯ ಎಂ. ವೀರಲಿಂಗಯ್ಯನಮಠ ಅವರ ಪುತ್ರರಾದ ಅವರು, ಗದಗದ ಸರ್ಕಾರಿ ಮಾಧ್ಯಮ ಹಿರಿಯ ಪ್ರಾಥಮಿಕ ಗಂಡು ಮಕ್ಕಳ ಶಾಲೆ ಸಂಖ್ಯೆ 1 ಹಾಗೂ ವಿದ್ಯಾದಾನ ಗಂಡು ಮಕ್ಕಳ ಶಾಲೆಯಲ್ಲಿ ಶಿಕ್ಷಣ ಪಡೆದಿದ್ದಾರೆ.

ತಂದೆಯವರ ಮಾರ್ಗದರ್ಶನದಲ್ಲಿ 1982ರಲ್ಲಿ ಆರಂಭವಾದ ಮಂಜುನಾಥ ಟೀ ಕಂಪನಿ ಚಹಾಪುಡಿ ವ್ಯಾಪಾರದಲ್ಲಿ ಅನುಭವ ಪಡೆದಿದ್ದಾರೆ. 2022ರಲ್ಲಿ ವೀರಲಿಂಗಯ್ಯನಮಠ ಕಂಪನಿ ಹೆಸರಿನಲ್ಲಿ ಬಿಪಿಸಿಎಲ್ ಪೆಟ್ರೋಲ್ ಪಂಪ್ ವಿತರಕ ವ್ಯವಹಾರದಲ್ಲಿಯೂ ತೊಡಗಿಸಿಕೊಂಡಿದ್ದಾರೆ.

ಲಿಂಗಾಯತ ಪ್ರಗತಿಶೀಲ ಸಂಘದ ಕೋಶಾಧ್ಯಕ್ಷರಾಗಿ, ಜಗದ್ಗುರು ತೋಂಟದಾರ್ಯ ಜಾತ್ರಾ ಮಹೋತ್ಸವದ ಉಪಾಧ್ಯಕ್ಷರಾಗಿ, ಗ್ರೇನ್ ಮಾರ್ಕೆಟ್ ವ್ಯಾಪಾರಸ್ಥರ ಸಂಘದ ಅಧ್ಯಕ್ಷರಾಗಿ, ಲಯನ್ಸ್ ಕ್ಲಬ್ ಆಫ್ ಗದಗ–ಬೆಟಗೇರಿಯ ಕೋಶಾಧ್ಯಕ್ಷರಾಗಿ ಹಾಗೂ ಗ್ರಾಹಕ ವಸ್ತುಗಳ ವಿತರಕರ ಸಂಘದ ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ.

ವ್ಯಾಪಾರ, ವಾಣಿಜ್ಯ, ಸಾಹಿತ್ಯ, ಶಿಕ್ಷಣ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ಅನುಭವ ಹೊಂದಿರುವ ನೂತನ ಪದಾಧಿಕಾರಿಗಳು, 2026–27ನೇ ಸಾಲಿನಲ್ಲಿ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಕಾರ್ಯಚಟುವಟಿಕೆಗಳಿಗೆ ಮುನ್ನಡೆ ನೀಡಲಿದ್ದಾರೆ.

### ಅ. 11ರಿಂದ ಜಮಖಂಡಿಯಲ್ಲಿ 35ನೇ ದಸರಾ ದರ್ಬಾರ್ ಮಹೋತ್ಸವ

# ಗುರುಪರಂಪರೆಯ ವೈಭವದ ಪ್ರತೀಕ ರಂಭಾಪುರಿ ದಸರೆ

ಭಾರತೀಯ ಸಂಸ್ಕೃತಿಯ ಜೀವಾಳವಾಗಿರುವ ಹಬ್ಬಗಳು ಧಾರ್ಮಿಕ ನಂಬಿಕೆ, ಸಾಂಸ್ಕೃತಿಕ ಪರಂಪರೆ ಹಾಗೂ ಮಾನವೀಯ ಮೌಲ್ಯಗಳನ್ನು ಬೆಸೆಯುವ ಪವಿತ್ರ ಸೇತುವೆಗಳಾಗಿವೆ. ಅಧರ್ಮದ ವಿರುದ್ಧ ಧರ್ಮದ ವಿಜಯ, ದುಷ್ಟಶಕ್ತಿಗಳ ದಮನ ಮತ್ತು ಸಜ್ಜನರ ರಕ್ಷಣೆಯ ಸಂಕೇತವಾದ ದಸರೆಗೆ ಭಾರತೀಯ ಪರಂಪರೆಯಲ್ಲಿ ವಿಶಿಷ್ಟ ಸ್ಥಾನವಿದೆ.

ವಿಜಯನಗರ ಸಾಮ್ರಾಜ್ಯದ ಅರಸರು ದಸರೆಯನ್ನು ವೈಭವದಿಂದ ಆಚರಿಸಿದರೆ, ಮೈಸೂರು ಅರಸರು ಈ ಉತ್ಸವಕ್ಕೆ ಮತ್ತಷ್ಟು ಸಾಂಸ್ಕೃತಿಕ ಮೆರುಗು ನೀಡಿದರು. ಇದೇ ಪರಂಪರೆಯ ಮತ್ತೊಂದು ಆಧ್ಯಾತ್ಮಿಕ ಅಭಿವ್ಯಕ್ತಿಯಾಗಿ ಬಾಳೆಹೊನ್ನೂರು ಶ್ರೀಮದ್ ರಂಭಾಪುರಿ ಜಗದ್ಗುರು ವೀರಸಿಂಹಾಸನ ಮಹಾಸಂಸ್ಥಾನ ಪೀಠದ ಶರನ್ನವರಾತ್ರಿ ದಸರಾ ದರ್ಬಾರ್ ಮಹೋತ್ಸವ ಗಮನ ಸೆಳೆಯುತ್ತದೆ.



ವೀರಶೈವ ಧರ್ಮದ ಆದಿ ಪಂಚಪೀಠಗಳಲ್ಲಿ ಪ್ರಥಮ ಸ್ಥಾನ ಪಡೆದಿರುವ ರಂಭಾಪುರಿ ಪೀಠವು ಧರ್ಮ, ಸಂಸ್ಕಾರ, ಮಾನವೀಯತೆ ಮತ್ತು ಸಾಮಾಜಿಕ ಸಾಮರಸ್ಯದ ಮೌಲ್ಯಗಳನ್ನು ಜನಸಮುದಾಯಕ್ಕೆ ತಲುಪಿಸುತ್ತಿದೆ. ಪೀಠದಲ್ಲಿ ಪ್ರಾಚೀನ ಕಾಲದಿಂದ ನಡೆದುಕೊಂಡು ಬಂದ ದಸರಾ ಮಹೋತ್ಸವಕ್ಕೆ 1925ರಿಂದ ವ್ಯಾಪಕ ಜನಸಂಪರ್ಕದ ಆಯಾಮ ದೊರೆಯಿತು. ನಂತರದ ಜಗದ್ಗುರುಗಳು ಈ ಪರಂಪರೆಯನ್ನು ಮುಂದುವರಿಸಿದರು.

ಪ್ರಸ್ತುತ ಜಗದ್ಗುರು ಪ್ರಸನ್ನ ರೇಣುಕ ಡಾ. ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರ ಸಾನ್ನಿಧ್ಯದಲ್ಲಿ ಧಾರ್ಮಿಕ ಆಚರಣೆಗಳಿಗೆ ಹೊಸ ಚೈತನ್ಯ ದೊರೆತಿದೆ. ದಸರಾ ಮಹೋತ್ಸವದ ಸಂದರ್ಭದಲ್ಲಿ ಇಷ್ಟಲಿಂಗ ಪೂಜೆ, ಧರ್ಮೋಪನ್ಯಾಸ, ಸಾಹಿತ್ಯಿಕ ಚರ್ಚೆ, ಸಂಗೀತ, ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಸಾಧಕರಿಗೆ ಸನ್ಮಾನ ನಡೆಯುತ್ತವೆ.

ಆನೆ, ಅಂಬಾರಿ, ಕುದುರೆ, ಪಲ್ಲಕ್ಕಿ, ಧರ್ಮಪತಾಕೆ ಮತ್ತು ವಿವಿಧ ವಾದ್ಯಗಳೊಂದಿಗೆ ನಡೆಯುವ ಜಗದ್ಗುರುಗಳ ಪುರಪ್ರವೇಶ ಮೆರವಣಿಗೆ ಉತ್ಸವದ ಪ್ರಮುಖ ಆಕರ್ಷಣೆಯಾಗಿದೆ. ಮಹಾನವಮಿ ಹಾಗೂ ವಿಜಯದಶಮಿಯಂದು ಪರಂಪರಾನುಗತ ಪೂಜೆ, ಅಡ್ಡಪಲ್ಲಕ್ಕಿ ಮಹೋತ್ಸವ ಮತ್ತು ಶಮೀಸೀಮೋಲ್ಲಂಘನ ಮುಂತಾದ ಆಚರಣೆಗಳು ನೆರವೇರುತ್ತವೆ.

ಅಕ್ಟೋಬರ್ 11ರಿಂದ 21ರವರೆಗೆ ಬಾಗಲಕೋಟೆ ಜಿಲ್ಲೆಯ ಐತಿಹಾಸಿಕ ಜಮಖಂಡಿಯಲ್ಲಿ 35ನೇ ದಸರಾ ದರ್ಬಾರ್ ಮಹೋತ್ಸವ ಜರುಗಲಿದೆ.

ಧರ್ಮ ಮತ್ತು ಸಂಸ್ಕೃತಿಯ ಪುನಶ್ಚೇತನದೊಂದಿಗೆ ಸರ್ವ ಸಮುದಾಯಗಳ ನಡುವೆ ಪ್ರೀತಿ, ವಿಶ್ವಾಸ ಹಾಗೂ ಏಕತೆಯನ್ನು ಬಲಪಡಿಸುವುದು ಈ ಮಹೋತ್ಸವದ ಆಶಯವಾಗಿದೆ.

ರಂಭಾಪುರಿ ದಸರೆ ಕೇವಲ ಧಾರ್ಮಿಕ ಆಚರಣೆಯಲ್ಲ. ಅದು ಪರಂಪರೆಯ ಸಂರಕ್ಷಣೆ, ಮಾನವೀಯ ಮೌಲ್ಯಗಳ ಪ್ರತಿಪಾದನೆ ಮತ್ತು ಸುಸಂಸ್ಕೃತ ಸಮಾಜ ನಿರ್ಮಾಣಕ್ಕೆ ಪ್ರೇರಣೆ ನೀಡುವ ಆಧ್ಯಾತ್ಮಿಕ ಉತ್ಸವವಾಗಿದೆ.



–ಡಾ. ಗುರುಪಾದಯ್ಯ ವೀ. ಸಾಲಿಮಠ, ಸಾಹಿತಿಗಳು, ಸವಣೂರು

# ಅಂಗನವಾಡಿಯಲ್ಲಿ ಪೋಷಣೆ ಮಾಸಾಚರಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ನರಸಾಪುರ ಗ್ರಾಮದ ಆಶ್ರಯ ಕಾಲೋನಿಯ 281ನೇ ಅಂಗನವಾಡಿ ಕೇಂದ್ರದಲ್ಲಿ ಪೋಷಣೆ ಮಾಸಾಚರಣೆ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದ ಅಂಗವಾಗಿ ಗರ್ಭಿಣಿಯರಿಗೆ ಸೀಮಂತ, ಮಕ್ಕಳಿಗೆ ಅನ್ನಪ್ರಾಶನ, ಜನ್ಮದಿನ ಆಚರಣೆ, ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಪೌಷ್ಟಿಕ ಆಹಾರ ಪ್ರದರ್ಶನ ಮತ್ತು ವೀಕ್ಷಣೆ ಹಮ್ಮಿಕೊಳ್ಳಲಾಗಿತ್ತು.

ಸಂರಕ್ಷಣಾಧಿಕಾರಿ ರಾಜೇಶ್ವರಿ ಮೇಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕವಿತಾ ಹುನಗುಂದ ಅವರು ಮಕ್ಕಳ ಕಲಿಕೆ ಮತ್ತು ಬೆಳವಣಿಗೆಯ ಕುರಿತು ಮಾಹಿತಿ ನೀಡಿದರು.

ಗ್ರಾಮದ ಹಿರಿಯರಾದ ಕಲ್ಲಯ್ಯ ಹಿರೇಮಠ, ಆರೋಗ್ಯ ಸಂದರ್ಶಕಿ ಶೀಲಾ ಮಳೇಕರ, ಕಿರಿಯ ಆರೋಗ್ಯ ಸಹಾಯಕಿ ಜಯಶ್ರೀ ವಿಭೂತಿ ಹಾಗೂ ಮೇಲ್ವಿಚಾರಕಿ ಸುಜಾತಾ ಗಿರಣಿ ಸೇರಿದಂತೆ ಆಶಾ ಕಾರ್ಯಕರ್ತೆಯರು ಮತ್ತು ಅಂಗನವಾಡಿ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

ಮೇಲ್ವಿಚಾರಕಿ ಭುವನೇಶ್ವರಿ ಕುಂಬಾರ ನಿರೂಪಿಸಿದರು. ಚನ್ನಮ್ಮ ಎನ್. ವಂದಿಸಿದರು.

### ಹಾನಗಲ್ಲ ಕುಮಾರ ಶಿವಯೋಗಿಗಳು

# ಅಪ್ರತಿಮ ಶಿವಯೋಗಿಗಳು



**ವಿಜಯಸಾಕ್ಷಿ ಸುದ್ದಿ, ಗದಗ**

ಧಾರ್ಮಿಕ, ಶೈಕ್ಷಣಿಕ, ಸಾಮಾಜಿಕ ಹಾಗೂ ಔದ್ಯೋಗಿಕ ಕ್ಷೇತ್ರಗಳಲ್ಲಿ ಅಪಾರ ಕೊಡುಗೆ ನೀಡಿದ ಹಾನಗಲ್ಲ ಕುಮಾರ ಶಿವಯೋಗಿಗಳು ನಾಡು ಕಂಡ ಅಪ್ರತಿಮ ಶಿವಯೋಗಿಗಳು ಎಂದು ಖ್ಯಾತ ಪ್ರವಚನಕಾರ ಪಂ. ಶೇಖರಯ್ಯ ಶಾಸ್ತ್ರಿಗಳು ಮಲಕಸಮುದ್ರಮಠ ಹೇಳಿದರು.

ನಗರದ ಮುಳುಗುಂದ ನಾಕಾ ಬಳಿಯ ಶ್ರೀ ಅಡವೀಂದ್ರಸ್ವಾಮಿ ಮಠದಲ್ಲಿ ನಡೆದ 352ನೇ ಮಾಸಿಕ ಶಿವಾನುಭವ ಹಾಗೂ ಕುಮಾರ ಶಿವಯೋಗಿಗಳ 159ನೇ ಜಯಂತ್ಯುತ್ಸವದಲ್ಲಿ ಅವರು ಮಾತನಾಡಿದರು. ಶ್ರೀ ಯೋಗಮಂದಿರ ಸ್ಥಾಪನೆ ಹಾಗೂ ಅಖಿಲ ಭಾರತ ವೀರಶೈವ ಮಹಾಸಭೆ ಸ್ಥಾಪನೆಯ ಮೂಲಕ ಸಮಾಜದ ಸಂಘಟನೆಗೆ ಕುಮಾರ ಶಿವಯೋಗಿಗಳು ಮಹತ್ವದ ಕೊಡುಗೆ ನೀಡಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಡಾ. ರಾಜೇಂದ್ರ ಎಸ್. ಗಡಾದ ಮಾತನಾಡಿ, ಅಲ್ಪಾವಧಿಯಲ್ಲಿಯೇ ಧಾರ್ಮಿಕ ಮತ್ತು ಸಾಮಾಜಿಕ ಕ್ಷೇತ್ರಗಳಲ್ಲಿ ಐತಿಹಾಸಿಕ ಸಾಧನೆ ಮಾಡಿದ ಕುಮಾರ ಶಿವಯೋಗಿಗಳ ಸೇವೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವುದು ಅಗತ್ಯ ಎಂದರು.

ವೇದಮೂರ್ತಿ ಶ್ರೀ ಮಹೇಶ್ವರ ಸ್ವಾಮಿಗಳ ಸಮ್ಮುಖದಲ್ಲಿ ನಡೆದ ಕಾರ್ಯಕ್ರಮದಲ್ಲಿ ಲಲಿತ ಸಹಸ್ರನಾಮಾವಳಿ ಪಠಣ ನಡೆಯಿತು. ಲಿಂಗೈಕ್ಯರಾದ ಎ.ಎನ್. ಬಸ್ತಿ, ಶ್ರೀಶೈಲಪ್ಪ ಎಸ್. ಕಾವೇರಿ ಹಾಗೂ ಸಿದ್ದಲಿಂಗಯ್ಯ (ಸಂಜಯ) ಎಂ. ಹುಬಳಿಮಠ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಭಕ್ತಿಸೇವೆ ಸಲ್ಲಿಸಿದವರು ಹಾಗೂ ಚಾರಧಾಮ ಯಾತ್ರೆ ಕೈಗೊಂಡ ಗುರಣ್ಣ ನಿಡಗುಂದಿ ದಂಪತಿಗಳನ್ನು ಸನ್ಮಾನಿಸಲಾಯಿತು.

ಜಗದೀಶ್ವರ ಸ್ವಾಮಿಗಳು ಹಿರೇಮಠ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು. ಶ್ರೀ ವೀರೇಶ್ವರಸ್ವಾಮಿ ಹೊಸಳ್ಳಿಮಠ ಹಾಗೂ ವಿ.ಎಂ. ಕುಂದ್ರಾಳಹಿರೇಮಠ ನಿರೂಪಿಸಿದರು. ಯು.ಆರ್. ಭೂಸನೂರಮಠ ಸ್ವಾಗತಿಸಿ, ವಂದಿಸಿದರು.

# ಅಡವೀಂದ್ರಸ್ವಾಮಿ ಮಠದಲ್ಲಿ ಅ. 11ರಿಂದ ದಸರಾ ಮಹೋತ್ಸವ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಅಡವೀಂದ್ರಸ್ವಾಮಿ ಮಠದಲ್ಲಿ 2026ನೇ ಸಾಲಿನ ದಸರಾ ಮಹೋತ್ಸವ, 46ನೇ ವರ್ಷದ ಶ್ರೀದೇವಿ ಪುರಾಣ ಪ್ರವಚನ ಹಾಗೂ 12ನೇ ವರ್ಷದ ಶ್ರೀ ಅನ್ನಪೂರ್ಣೇಶ್ವರಿ ದೇವಿ ಮಹಾರಥೋತ್ಸವ ಅ. 11ರಿಂದ 23ರವರೆಗೆ ಜರುಗಲಿದೆ ಎಂದು ಜಾತ್ರಾಮಹೋತ್ಸವ ಸಮಿತಿ ಅಧ್ಯಕ್ಷ ಸಂತೋಷ ಮಹೇಶಚಂದ್ರ ಕಬಾಡರ ತಿಳಿಸಿದರು.



ಮಠದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅ. 11ರಂದು ಬೆಳಿಗ್ಗೆ ಧರ್ಮಧ್ವಜಾರೋಹಣ ಹಾಗೂ ಸಂಜೆ ಘಟಸ್ಥಾಪನೆ ಮತ್ತು ಶ್ರೀದೇವಿ ಪುರಾಣ ಪ್ರಾರಂಭೋತ್ಸವ ನಡೆಯಲಿದೆ. ಅ. 11ರಿಂದ 21ರವರೆಗೆ ಪಂ. ರಾಜಗುರು ಗುರುಸ್ವಾಮಿ ಕಲಕೇರಿ ಅವರಿಂದ ಪುರಾಣ ಪ್ರವಚನ ಹಾಗೂ ಚನ್ನಬಸಯ್ಯ ಶಾಸ್ತ್ರಿಗಳು ಹೇಮಗಿರಿಮಠ ಅವರಿಂದ ಪುರಾಣ ಪಠಣ ಜರುಗಲಿದೆ ಎಂದರು.

ಅ. 13ರಂದು ಲಲಿತ ಸಹಸ್ರನಾಮ ಪಠಣ ಹಾಗೂ ಉಡಿ ತುಂಬುವ ಕಾರ್ಯಕ್ರಮ, ಅ. 15ರಂದು ಮಹಿಳೆಯರಿಗೆ ಅಡುಗೆ ಸ್ಪರ್ಧೆ, ಅ. 16ರಂದು ಅರಿಷಿಣ–ಕುಂಕುಮ ಮತ್ತು ಬಳೆಸೇವೆ, ಅ. 20ರಂದು ಆಯುಧಪೂಜೆ, ಕುಮಾರಿ ಪೂಜೆ ಹಾಗೂ ಶ್ರೀದೇವಿ ಪುರಾಣ ಮಂಗಲೋತ್ಸವ ನಡೆಯಲಿವೆ. ಅ. 21ರಂದು ತೇರಿನ ಕಳಸಾರೋಹಣ ಹಾಗೂ ವಿಜಯದಶಮಿ ಬನ್ನಿ ಮುಡಿಯುವ ಕಾರ್ಯಕ್ರಮ ಜರುಗಲಿದೆ.

ಅ. 22ರಂದು ಬೆಳಿಗ್ಗೆ ಶ್ರೀ ಅನ್ನಪೂರ್ಣೇಶ್ವರಿ ದೇವಿಗೆ ಹಾಗೂ ಕರ್ತೃ ಗದ್ದುಗೆಗೆ ರುದ್ರಾಭಿಷೇಕ, ಮಠದ ಸಂಸ್ಥಾಪಕ ಶ್ರೀಗಳ ಪುಣ್ಯಸ್ಮರಣೋತ್ಸವ ಮತ್ತು ಮಹಾಪ್ರಸಾದ ನಡೆಯಲಿವೆ. ಮಧ್ಯಾಹ್ನ 12ಕ್ಕೆ ಚೊಚ್ಚಲ ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸಂಜೆ 5ಕ್ಕೆ ಸದ್ಭಕ್ತ ಮಹಿಳೆಯರಿಂದ ಶ್ರೀ ಅನ್ನಪೂರ್ಣೇಶ್ವರಿ ದೇವಿಯ ಮಹಾರಥೋತ್ಸವ ಸಂಭ್ರಮದಿಂದ ಜರುಗಲಿದೆ. ಸಂಜೆ 7.30ಕ್ಕೆ ಬಿ.ಬಿ. ಬಣ್ಣದ ಜಾನಪದ ಕಲಾಮೇಳದಿಂದ ಶ್ರೀದೇವಿ ಮಹಾತ್ಮೆ ದೊಡ್ಡಾಟ ಪ್ರದರ್ಶನಗೊಳ್ಳಲಿದೆ.

ಅ. 23ರಂದು ಸಂಜೆ 6.30ಕ್ಕೆ ಪುರವಂತರ ಸಮ್ಮುಖದಲ್ಲಿ ವಾದ್ಯ ವೈಭವದೊಂದಿಗೆ ಕಡುಬಿನ ಕಾಳಗ ನಡೆಯಲಿದೆ ಎಂದು ಕಬಾಡರ ತಿಳಿಸಿದರು.

ಜಾತ್ರಾಮಹೋತ್ಸವ ಸಮಿತಿ ಗೌರವಾಧ್ಯಕ್ಷರಾದ ಸದಾಶಿವಯ್ಯ ಮದರಿಮಠ ಹಾಗೂ ಚಂದ್ರು ಬಾಳಿಹಳ್ಳಿಮಠ ಮಾತನಾಡಿ, ಅವಳಿ ನಗರದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಶ್ರೀದೇವಿಯ ಕೃಪೆಗೆ ಪಾತ್ರರಾಗಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಸಮಿತಿ ಕಾರ್ಯದರ್ಶಿ ಶಿವಪ್ರಭು ನೀಲಗುಂದ, ಕೋಶಾಧ್ಯಕ್ಷ ಪ್ರಭುಗೌಡ ಪಾಟೀಲ, ಮಹಿಳಾ ಘಟಕದ ಅಧ್ಯಕ್ಷೆ ಶಿವಲೀಲಾ ಅಕ್ಕಿ, ಕಾರ್ಯದರ್ಶಿ ಅಶ್ವಿನಿ ನೀಲಗುಂದ ಸೇರಿದಂತೆ ಸಮಿತಿಯ ಪದಾಧಿಕಾರಿಗಳು, ನಿರ್ದೇಶಕರು ಹಾಗೂ ಮಹಿಳಾ ನಿರ್ದೇಶಕರು ಉಪಸ್ಥಿತರಿದ್ದರು.

## ಸೋಂಕಿತರ ಬಗ್ಗೆ ತಾರತಮ್ಯ ಬೇಡ: ಜಿಲ್ಲಾಧಿಕಾರಿ ಸ್ನೇಹಲ್ ಆರ್.

# ಯುವಜನರಿಂದ ಎಚ್‌ಐವಿ ತಡೆಗೆ ಜಾಗೃತಿ ಮೂಡಲಿ



**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಜಿಲ್ಲೆಯಲ್ಲಿ ಎಚ್‌ಐವಿ ಸೋಂಕಿನ ಪ್ರಮಾಣ ಕಡಿಮೆಯಾಗುತ್ತಿರುವುದು ಆಶಾದಾಯಕ ಬೆಳವಣಿಗೆಯಾಗಿದೆ. ಆದರೂ ಸೋಂಕಿನ ಸಂಪೂರ್ಣ ನಿಯಂತ್ರಣಕ್ಕಾಗಿ ನಿರಂತರ ಜಾಗೃತಿ ಅಗತ್ಯ ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಹೇಳಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕಚೇರಿ ಆವರಣದಲ್ಲಿ ಅ. 9ರಂದು ಜಿಲ್ಲಾ ಮಟ್ಟದ ಯುವಜನೋತ್ಸವ ಹಾಗೂ ಎಚ್‌ಐವಿ, ಏಡ್ಸ್ ತಡೆಗಟ್ಟುವ ಜಾಗೃತಿ ಅಭಿಯಾನದ ಅಂಗವಾಗಿ ಆಯೋಜಿಸಿದ್ದ ಮ್ಯಾರಥಾನ್‌ಗೆ ಚಾಲನೆ ನೀಡಿ ಅವರು ಮಾತನಾಡಿದರು.

ಯುವಜನರು, ವಿಶೇಷವಾಗಿ 15ರಿಂದ 25 ವರ್ಷದೊಳಗಿನವರು ಎಚ್‌ಐವಿ ಸೋಂಕಿನ ಹರಡುವಿಕೆ, ತಡೆಗಟ್ಟುವ ಕ್ರಮಗಳು ಹಾಗೂ ಚಿಕಿತ್ಸೆಯ ಕುರಿತು ಸರಿಯಾದ ಮಾಹಿತಿ ಪಡೆದು, ಸ್ನೇಹಿತರು ಮತ್ತು ಕುಟುಂಬದ ಸದಸ್ಯರಲ್ಲಿ ಜಾಗೃತಿ ಮೂಡಿಸಬೇಕು. ಒಂದು ದಿನದ ಕಾರ್ಯಕ್ರಮಗಳಿಗೆ ಮಾತ್ರ ಜಾಗೃತಿ ಸೀಮಿತವಾಗದೆ ನಿರಂತರವಾಗಿ ಅರಿವು ಮೂಡಿಸುವ ಕಾರ್ಯ ನಡೆಯಬೇಕು ಎಂದರು.

**ಸೋಂಕಿತರ ಬಗ್ಗೆ ತಾರತಮ್ಯ ಸಲ್ಲದು**

ಎಚ್‌ಐವಿ ಸೋಂಕು ದೃಢಪಟ್ಟವರು ಸಮಾಜದ ಭಯದಿಂದ ಚಿಕಿತ್ಸೆ ನಿಲ್ಲಿಸಬಾರದು. ಸೋಂಕಿತರ ಬಗ್ಗೆ ತಾರತಮ್ಯ ಮಾಡದೆ ಗೌರವ ಮತ್ತು ಸಹಕಾರ ನೀಡಬೇಕು. ವೈದ್ಯರ ಸಲಹೆಯಂತೆ ಆಂಟಿ-ರೆಟ್ರೋವೈರಲ್ ಥೆರಪಿ (ಎಆರ್‌ಟಿ) ಚಿಕಿತ್ಸೆಯನ್ನು ನಿರಂತರವಾಗಿ ಪಡೆಯುವುದರಿಂದ ವೈರಸ್ ಪ್ರಮಾಣ ನಿಯಂತ್ರಣದಲ್ಲಿಡಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಸೋಂಕಿತರನ್ನು ಗುರುತಿಸುವುದು, ಅವರಿಗೆ ಚಿಕಿತ್ಸೆ ಒದಗಿಸುವುದು ಹಾಗೂ ದೇಹದಲ್ಲಿನ ವೈರಸ್ ಪ್ರಮಾಣ ನಿಯಂತ್ರಿಸುವ ಗುರಿಗಳನ್ನು ಸಾಧಿಸುವಲ್ಲಿ ಆರೋಗ್ಯ ಇಲಾಖೆ ಕಾರ್ಯನಿರ್ವಹಿಸುತ್ತಿದೆ. ಎಚ್‌ಐವಿ ಕುರಿತು ತಪ್ಪು ಕಲ್ಪನೆಗಳನ್ನು ದೂರಮಾಡಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವಲ್ಲಿ ಮಾಧ್ಯಮಗಳ ಪಾತ್ರ ಮಹತ್ವದ್ದಾಗಿದೆ ಎಂದರು.

> ಯುವಜನರು ಎಚ್‌ಐವಿ ಸೋಂಕಿನ ಕುರಿತು ಸರಿಯಾದ ಮಾಹಿತಿ ಪಡೆದು ತಮ್ಮ ಸ್ನೇಹಿತರು, ಸಹಪಾಠಿಗಳು ಹಾಗೂ ಕುಟುಂಬದ ಸದಸ್ಯರೊಂದಿಗೆ ಹಂಚಿಕೊಳ್ಳಬೇಕು. ಸೋಂಕಿತರ ಬಗ್ಗೆ ತಾರತಮ್ಯ ಮಾಡದೆ, ಅವರಿಗೆ ಗೌರವ ಮತ್ತು ಸಹಕಾರ ನೀಡಬೇಕು. ಸೋಂಕಿನ ನಿಯಂತ್ರಣಕ್ಕೆ ನಿರಂತರ ಜಾಗೃತಿ ಅಗತ್ಯ.
>
> – ಸ್ನೇಹಲ್ ಆರ್, ಜಿಲ್ಲಾಧಿಕಾರಿ

**ಮ್ಯಾರಥಾನ್‌ನಲ್ಲಿ ಬಾಲು, ದೀಕ್ಷಾಗೆ ಪ್ರಥಮ ಸ್ಥಾನ**

ಮ್ಯಾರಥಾನ್‌ನ ಪುರುಷರ ವಿಭಾಗದಲ್ಲಿ ಬಾಲು ಹೇಗ್ರಿ ಪ್ರಥ-'ಮ, ಸುರೇಶ ಯಕ್ಕುಂಡಿ ದ್ವಿತೀಯ ಹಾಗೂ ಮಣಿಕಂಠ ಸುರಪುರ ತೃತೀಯ ಸ್ಥಾನ ಪಡೆದರು. ಮಹಿಳೆಯರ ವಿಭಾಗದಲ್ಲಿ ದೀಕ್ಷಾ ಎಚ್.ವಿ. ಪ್ರಥಮ, ಸಂಜನಾ ಯರಗಟ್ಟಿ ದ್ವಿತೀಯ ಹಾಗೂ ಸಹನಾ ಹಿರೇಗೌಡರ ತೃತೀಯ ಸ್ಥಾನ ಗಳಿಸಿದರು.

ವಿಜೇತರಿಗೆ ಕ್ರಮವಾಗಿ 5,000, 3,500 ಹಾಗೂ 2,500 ಬಹುಮಾನ ವಿತರಿಸಲಾಯಿತು. ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದವರು ಅಕ್ಟೋಬರ್ 17ರಂದು ದಾವಣಗೆರೆಯಲ್ಲಿ ನಡೆಯುವ ರಾಜ್ಯಮಟ್ಟದ ಮ್ಯಾರಥಾನ್‌ನಲ್ಲಿ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಪರಶುರಾಮ್ ಎಫ್.ಕೆ., ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಆರ್. ಪಾತ್ರೋಟ ಸೇರಿದಂತೆ ಆರೋಗ್ಯ ಇಲಾಖೆ ಹಾಗೂ ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕದ ಅಧಿಕಾರಿಗಳು, ಸಿಬ್ಬಂದಿ ಪಾಲ್ಗೊಂಡಿದ್ದರು.

## ಅನುಪಮಾ ನಿರಂಜನ ಮನೆಗೊಂದು ಗ್ರಂಥಾಲಯ ಉದ್ಘಾಟನೆ

# ಓದುವ ಹವ್ಯಾಸ ಬೆಳೆಸಿ, ಜ್ಞಾನಸಂಪತ್ತು ವಿಸ್ತರಿಸಿ



**ವಿಜಯಸಾಕ್ಷಿ ಸುದ್ದಿ,ಹಗರಿಬೊಮ್ಮನಹಳ್ಳಿ**

ಓದು ಬದುಕಿನ ಒಳಾರ್ಥಗಳನ್ನು ಅರಿಯಲು ನೆರವಾಗುತ್ತದೆ. ಪುಸ್ತಕಗಳು ಸ್ನೇಹಿತರಾಗಿ ನಮ್ಮನ್ನು ಜ್ಞಾನದ ಹೊಸ ಲೋಕಕ್ಕೆ ಕರೆದೊಯ್ಯುತ್ತವೆ.

ಹೀಗಾಗಿ ಮಕ್ಕಳಲ್ಲಿ ಹಾಗೂ ಯುವಜನರಲ್ಲಿ ಓದುವ ಹವ್ಯಾಸ ಬೆಳೆಸುವ ಜತೆಗೆ ಪುಸ್ತಕಗಳು ಓದುಗರನ್ನು ತಲುಪುವಂತೆ ಮಾಡುವ ಪ್ರಯತ್ನಗಳು ಹೆಚ್ಚಾಗಬೇಕು ಎಂದು ಸಾಹಿತಿಗಳು ಅಭಿಪ್ರಾಯಪಟ್ಟರು.

ಪಟ್ಟಣದ ಮಹಿಳಾ ಸಾಹಿತಿ ಸುಧಾ ಚಿದಾನಂದ ಗೌಡ ಅವರ ಮನೆಯಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರ ಹಾಗೂ ವಿಜಯನಗರ ಜಿಲ್ಲಾ ಜಾಗೃತಿ ಸಮಿತಿಯ ಪ್ರಯತ್ನದ ಫಲವಾಗಿ 'ಅನುಪಮಾ ನಿರಂಜನ ಮನೆಗೊಂದು ಗ್ರಂಥಾಲಯ' ಉದ್ಘಾಟನೆಗೊಂಡಿತು. ಇದೇ ಸಂದರ್ಭದಲ್ಲಿ ಕೆಚ್ಚಿನಬಂಡಿ ಗ್ರಾಮದ ಕವಿ ಪ್ರವೀಣ್ ವಿ.ಸಿ.ಕೆ. ಅವರ 'ಗುಳಿಕೆನ್ನೆ' ಕವನ ಸಂಕಲನವನ್ನು ರಂಗಕಲಾವಿದೆ ಕೆ. ನಾಗರತ್ನಮ್ಮ ಲೋಕಾರ್ಪಣೆಗೊಳಿಸಿದರು.

ಜಿಲ್ಲಾ ಸಂಚಾಲಕ ಹಾಗೂ ಸಾಹಿತಿ ಉಮಾ ಮಹೇಶ್ವರ ಮಾತನಾಡಿ, ಪುಸ್ತಕಗಳನ್ನು ಕೊಡುಗೆಯಾಗಿ ನೀಡುವ ಹವ್ಯಾಸ ಬೆಳೆಸಬೇಕು.

ಅವಿಭಜಿತ ಬಳ್ಳಾರಿ ಜಿಲ್ಲೆಯಲ್ಲಿ ಪ್ರಕಾಶನ ಮತ್ತು ಗ್ರಂಥಾಲಯ ಚಳವಳಿಗೆ ಶ್ರಮಿಸಿದ ಎಸ್.ಎಸ್. ಹಿರೇಮಠ, ಶೇಷಗಿರಿ ಹವಲ್ದಾರ್, ಖಾದರಬಾಷಾ, ಪಿ.ಆರ್. ವೆಂಕಟೇಶ್ ಸೇರಿದಂತೆ ಅನೇಕರ ಕೊಡುಗೆಯನ್ನು ಸ್ಮರಿಸಿದರು. ಜಿಲ್ಲೆಯಲ್ಲಿ ಗ್ರಂಥಾಲಯಗಳ ಸಂಖ್ಯೆ ಇನ್ನಷ್ಟು ಹೆಚ್ಚಬೇಕು. ವ್ಯಕ್ತಿಗಳ ಪ್ರಚಾರಕ್ಕಿಂತ ವಿಷಯಗಳ ಪ್ರಚಾರಕ್ಕೆ ಆದ್ಯತೆ ನೀಡಬೇಕು ಎಂದರು.

ತಾಲೂಕು ಸಂಚಾಲಕ ಗಣೇಶ ರಾವ್ ಹವಲ್ದಾರ್ ಮಾತನಾಡಿ, ಪುಸ್ತಕಗಳು ಓದುಗರಿಗೆ ಉತ್ತಮ ಸ್ನೇಹಿತರಾಗುತ್ತವೆ.

ಸಾಹಿತ್ಯ ಓದುವುದರಿಂದ ಸಮಸ್ಯೆಗಳನ್ನು ಎದುರಿಸುವ ಸಾಮರ್ಥ್ಯ ಬೆಳೆಯುತ್ತದೆ. ಪುಸ್ತಕಗಳನ್ನು ಕೊಂಡು ಓದುವ ಹವ್ಯಾಸ ಬೆಳೆದಾಗ ಮಾತ್ರ ಪ್ರಕಾಶನ ಕ್ಷೇತ್ರವೂ ಉಳಿದು ಬೆಳೆಯಲು ಸಾಧ್ಯ ಎಂದರು.

'ಗುಳಿಕೆನ್ನೆ' ಕವನ ಸಂಕಲನದ ಕುರಿತು ಮಾತನಾಡಿದ ಜಯಸೂರ್ಯ, ಕವಿ ಕಿರಣ್ ಅವರ ಸಾಹಿತ್ಯ ಪ್ರಯತ್ನಗಳನ್ನು ಶ್ಲಾಘಿಸಿ, ಓದುಗರು ಕೃತಿಯನ್ನು ಖರೀದಿಸಿ ಪ್ರೋತ್ಸಾಹಿಸಬೇಕು ಎಂದು ಮನವಿ ಮಾಡಿದರು. ಸುಯೋಧನ ಪ್ರಕಾಶನ ಕೃತಿಯನ್ನು ಪ್ರಕಟಿಸಿದೆ.

ರಂಗಕಲಾವಿದೆ ನಾಗರತ್ನಮ್ಮ ಮಾತನಾಡಿ, ತಮ್ಮಿಂದ ಕೃತಿ ಬಿಡುಗಡೆ ಮಾಡಿಸಿರುವುದು ಹೆಮ್ಮೆಯ ಸಂಗತಿ ಎಂದರು. ತಮ್ಮ ಮನೆಯಲ್ಲಿಯೂ ಹಲವು ಪುಸ್ತಕಗಳಿದ್ದು, ಅಲ್ಲಿಯೂ ಮನೆಗೊಂದು ಗ್ರಂಥಾಲಯ ಕಾರ್ಯಕ್ರಮ ಆಯೋಜಿಸುವುದಾಗಿ ತಿಳಿಸಿದರು.

> ಗ್ರಂಥಾಲಯಗಳಲ್ಲಿರುವ ಪುಸ್ತಕಗಳು ಓದುಗರನ್ನು ತಲುಪಬೇಕು. ಅಣೆಕಟ್ಟಿನ ನೀರು ಕಾಲುವೆಗಳ ಮೂಲಕ ಹೊಲಗದ್ದೆಗಳಿಗೆ ಹರಿಯುವಂತೆ, ಪುಸ್ತಕಗಳು ಜನರನ್ನು ತಲುಪಿ ಅವರ ಜ್ಞಾನವನ್ನು ಹೆಚ್ಚಿಸುವ ಪ್ರಯತ್ನ ನಡೆಯಬೇಕು.
>
> – ಹುರಕಡ್ಲಿ ಶಿವಕುಮಾರ್, ಸಾಹಿತಿ

ಕಾರ್ಯಕ್ರಮದಲ್ಲಿ ಜಿಲ್ಲಾ ಸಂಚಾಲಕ ಉಮಾ ಮಹೇಶ್ವರ, ತಾಲೂಕು ಸಂಚಾಲಕ ಗಣೇಶ ರಾವ್ ಹವಲ್ದಾರ್, ಸಕ್ರಹಳ್ಳಿ ಕೊಟ್ರೇಶ್, ಸೋದಾ ವಿರುಪಾಕ್ಷಗೌಡ, ಹುರಕಡ್ಲಿ ಶಿವಕುಮಾರ್, ಉಪ್ಪಾರ ಬಸಪ್ಪ, ಎ.ಆರ್. ಪಂಪಣ್ಣ, ಕವಿ ಪ್ರವೀಣ್ ವಿ.ಸಿ.ಕೆ. ಸೇರಿದಂತೆ ಹಲವು ಸಾಹಿತಿಗಳು, ಕಲಾವಿದರು ಹಾಗೂ ಸಾಹಿತ್ಯಾಸಕ್ತರು ಉಪಸ್ಥಿತರಿದ್ದರು. ನಿವೃತ್ತ ಮುಖ್ಯಶಿಕ್ಷಕ ಮಲ್ಲೇಶಪ್ಪ ಸ್ವಾಗತಿಸಿದರು.

## ಮಾಲವಿ ಮುದ್ದಿ ಬಸವೇಶ್ವರ ದೇವಸ್ಥಾನದ ಶಿಲ್ಪಿಗಳಿಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ಮಾಲವಿ ಗ್ರಾಮದ ಆರಾಧ್ಯ ದೈವ ಶ್ರೀ ಮುದ್ದಿ ಬಸವೇಶ್ವರ ಸ್ವಾಮಿ ದೇವಸ್ಥಾನದ ನಿರ್ಮಾಣ ಕಾರ್ಯದಲ್ಲಿ ಶ್ರಮಿಸಿದ ಶಿಲ್ಪಿಗಳನ್ನು ದೇವಸ್ಥಾನದ ಟ್ರಸ್ಟ್ ಪದಾಧಿಕಾರಿಗಳು, ದೈವಸ್ಥರು ಹಾಗೂ ಗ್ರಾಮಸ್ಥರು ಸನ್ಮಾನಿಸಿದರು.

ದೇವಸ್ಥಾನದ ನಿರ್ಮಾಣ ಕಾರ್ಯ ದಶಕಗಳ ಹಿಂದೆಯೇ ಆರಂಭವಾಗಿದ್ದರೂ, ಕಾರಣಾಂತರಗಳಿಂದ ಕಾಮಗಾರಿ ಸ್ಥಗಿತಗೊಂಡಿತ್ತು. ಪ್ರತಿ ವರ್ಷ ಹಂಪೆಯ ಹುಣ್ಣಿಮೆಯ ಬಳಿಕ ನಡೆಯುವ ಜಾತ್ರಾ ಮಹೋತ್ಸವವನ್ನು ಚಪ್ಪರ, ಪೆಂಡಾಲ್ ಹಾಕಿಕೊಂಡು ಆಚರಿಸಲಾಗುತ್ತಿತ್ತು. ದೇವಸ್ಥಾನದ ನಿರ್ಮಾಣ ಯಾವಾಗ ಪೂರ್ಣಗೊಳ್ಳಲಿದೆ ಎಂಬ ನೋವು ಗ್ರಾಮಸ್ಥರನ್ನು ಕಾಡುತ್ತಿತ್ತು.

ಶಾಸಕ ಕೆ. ನೇಮಿರಾಜ್ ನಾಯ್ಕ್ ಅವರ ಅನುದಾನ, ದಾನಿಗಳ ನೆರವು ಹಾಗೂ ಗ್ರಾಮಸ್ಥರ ಸಹಕಾರದಿಂದ ದೇವಸ್ಥಾನದ ಕಲ್ಲಿನ ಕಂಬಗಳು ಮತ್ತು ಮೇಲ್ಛಾವಣಿ ಕಾಮಗಾರಿ ಪೂರ್ಣಗೊಂಡಿದ್ದು, ಬಹುದಿನಗಳ ಕನಸು ನನಸಾಗಿದೆ.

ದೇವಸ್ಥಾನದ ಟ್ರಸ್ಟ್ ಅಧ್ಯಕ್ಷ ನೆರಗಲ್ ಕೊಟ್ರೇಶ್ ಮಾತನಾಡಿ, ದೇವಸ್ಥಾನದ ರಾಜಗೋಪುರ ನಿರ್ಮಾಣ ಸೇರಿದಂತೆ ಸುತ್ತಲಿನ ಅಭಿವೃದ್ಧಿ ಕಾಮಗಾರಿಗಳು ಇನ್ನೂ ಪೂರ್ಣಗೊಳ್ಳಬೇಕಿವೆ. ಇದಕ್ಕೆ ಭಕ್ತರು ಹಾಗೂ ದಾನಿಗಳ ಸಹಕಾರ ಅಗತ್ಯವಿದೆ ಎಂದರು.

ಮುಖಂಡ ಹ್ಯಾಳೆದು ಚೆನ್ನಬಸಪ್ಪ ಮಾತನಾಡಿ, ಜಾತ್ರೆ ಬಂದಾಗಲೆಲ್ಲ ದೇವಸ್ಥಾನದ ನಿರ್ಮಾಣ ಯಾವಾಗ ಪೂರ್ಣಗೊಳ್ಳಲಿದೆ ಎಂಬ ಬೇಸರ ಗ್ರಾಮಸ್ಥರಲ್ಲಿತ್ತು. ಮೇಲ್ಛಾವಣಿ ಕಾಮಗಾರಿ ಪೂರ್ಣಗೊಂಡಿರುವುದು ಸಮಾಧಾನ ತಂದಿದೆ ಎಂದು ಹೇಳಿದರು.

ಮುಖಂಡ ಚಿನಿವಾಲರ ಕೊಟ್ರೇಶ್ ಮಾತನಾಡಿ, ಶ್ರೀ ಮುದ್ದಿ ಬಸವೇಶ್ವರ ಸ್ವಾಮಿ ದೇವಸ್ಥಾನ ಶಾಶ್ವತವಾಗಿ ಉಳಿಯುವಂತೆ ರಾಜಗೋಪುರ ಸೇರಿದಂತೆ ಬಾಕಿ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ಭಕ್ತರು ತನು, ಮನ, ಧನದ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ನೆರಗಲ್ ಮಲ್ಲಿಕಾರ್ಜುನ, ಚಿನಿವಾಲರ ಈಶಪ್ಪ, ಅಡೂರು ಬಸವರಾಜ, ಉಪ್ಪಾರ ಬಸವರಾಜ, ಕಬ್ಬಿ ಕೊಟ್ರೇಶ್, ಚಿಲಗೋಡು ಸುರೇಶ್, ಹಂಪಸಾಗರದ ಹುಸೇನ್ ಸಾಬ್, ಗಡದ ಮಹೇಶ, ರೆಡ್ಡಿ ಸುರೇಶ್, ಛಲವಾದಿ ಪರಸಪ್ಪ, ಅಣಿಗಿ ಬಸವರಾಜ, ರಾಟಿ ನಾಗರಾಜ ಸೇರಿದಂತೆ ಗ್ರಾಮಸ್ಥರು ಹಾಗೂ ದೇವಸ್ಥಾನದ ಶಿಲ್ಪಿಗಳು ಉಪಸ್ಥಿತರಿದ್ದರು.

## ಕಾಂಗ್ರೆಸ್ ದ್ವಂದ್ವ ನೀತಿಗೆ ಸಂತೋಷ ಅಕ್ಕಿ ತಿರುಗೇಟು

# ಗ್ಯಾರಂಟಿಗೆ ಕತ್ತರಿ, SIRಗೆ ಅಡ್ಡಿ

**ವಿಜಯಸಾಕ್ಷಿ ಸುದ್ದಿ, ಗದಗ**

ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಪಟ್ಟಿ ಪರಿಷ್ಕರಣೆಗೆ ಮುಂದಾಗಿರುವ ಕಾಂಗ್ರೆಸ್ ಸರ್ಕಾರ, ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (SIR) ಪ್ರಕ್ರಿಯೆಗೆ ವಿರೋಧ ವ್ಯಕ್ತಪಡಿಸುತ್ತಿರುವುದು ದ್ವಂದ್ವ ನೀತಿಯಾಗಿದೆ ಎಂದು ಗದಗ ಜಿಲ್ಲಾ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ ಟೀಕಿಸಿದ್ದಾರೆ.



ಗ್ಯಾರಂಟಿ ಯೋಜನೆಗಳಿಗಾಗಿ 51,034 ಕೋಟಿಗೂ ಅಧಿಕ ಹಣ ವ್ಯಯಿಸಿರುವ ಸರ್ಕಾರ, ಅಭಿವೃದ್ಧಿ ಕಾಮಗಾರಿಗಳ ಅನುದಾನದಲ್ಲಿ 5,229 ಕೋಟಿಗೂ ಅಧಿಕ ಮೊತ್ತ ಕಡಿತಗೊಳಿಸಿದೆ. ಆರ್ಥಿಕ ಹೊರೆಯನ್ನು ನಿಭಾಯಿಸಲಾಗದೆ ಫಲಾನುಭವಿಗಳ ಪಟ್ಟಿ ಪರಿಷ್ಕರಣೆಗೆ ಮುಂದಾಗಿರುವುದು ಆಡಳಿತ ವೈಫಲ್ಯಕ್ಕೆ ಸಾಕ್ಷಿ ಎಂದು ಅವರು ಆರೋಪಿಸಿದ್ದಾರೆ.

ಚುನಾವಣಾ ಆಯೋಗದ ಖಖಖ ಪ್ರಕ್ರಿಯೆಯು ನಕಲಿ, ಮೃತ ಹಾಗೂ ಸ್ಥಳಾಂತರಗೊಂಡ ಮತದಾರರನ್ನು ಗುರುತಿಸಿ ಮತದಾರರ ಪಟ್ಟಿಯನ್ನು ಶುದ್ಧೀಕರಿಸುವ ಉದ್ದೇಶ ಹೊಂದಿದೆ. ಆದರೆ, ಈ ಪ್ರಕ್ರಿಯೆಯಿಂದ ತಮ್ಮ ಸಾಂಪ್ರದಾಯಿಕ ಮತಬ್ಯಾಂಕ್‌ಗೆ ಧಕ್ಕೆಯಾಗಬಹುದು ಎಂಬ ಭೀತಿಯಿಂದ ಕಾಂಗ್ರೆಸ್ ನಾಯಕರು ಪ್ರತಿಭಟನೆ ನಡೆಸುತ್ತಿದ್ದಾರೆ ಎಂದು ಸಂತೋಷ ಅಕ್ಕಿ ವ್ಯಂಗ್ಯವಾಡಿದ್ದಾರೆ.

ಮತದಾರರ ಪಟ್ಟಿಯಿಂದ ಹೆಸರು ತೆಗೆದುಹಾಕುವ ಪ್ರಕ್ರಿಯೆ ನಿಯಮಾನುಸಾರ ನಡೆಯಬೇಕು. ಆಕ್ಷೇಪಣೆ ಬಂದ ತಕ್ಷಣವೇ ಯಾವುದೇ ಅರ್ಹ ಮತದಾರರ ಹೆಸರನ್ನು ತೆಗೆದುಹಾಕಲು ಸಾಧ್ಯವಿಲ್ಲ. ಸಂಬಂಧಪಟ್ಟವರಿಗೆ ನೋಟಿಸ್ ನೀಡಿ ವಿಚಾರಣೆ ನಡೆಸಿದ ಬಳಿಕವೇ ನಿರ್ಧಾರ ಕೈಗೊಳ್ಳಲಾಗುತ್ತದೆ. ಬೂತ್ ಮಟ್ಟದ ಅಧಿಕಾರಿಗಳು ಮನೆಗಳಿಗೆ ಭೇಟಿ ನೀಡಿ ದಾಖಲೆ ಪರಿಶೀಲಿಸುವ ಕ್ರಮವನ್ನು ಬಿಜೆಪಿ ಯುವ ಮೋರ್ಚಾ ಸ್ವಾಗತಿಸುತ್ತದೆ ಎಂದು ತಿಳಿಸಿದ್ದಾರೆ.

SIR ಪ್ರಕ್ರಿಯೆಗೆ ಅಡ್ಡಿಪಡಿಸುವುದನ್ನು ಹಾಗೂ ವಿರೋಧ ಪಕ್ಷದ ಕಾರ್ಯಕರ್ತರ ವಿರುದ್ಧ ದೌರ್ಜನ್ಯ ನಡೆಸುವುದನ್ನು ಕಾಂಗ್ರೆಸ್ ಸರ್ಕಾರ ನಿಲ್ಲಿಸಬೇಕು. ಪ್ರಜಾಪ್ರಭುತ್ವದ ಹಿತದೃಷ್ಟಿಯಿಂದ ಮತದಾರರ ಪಟ್ಟಿ ಪರಿಷ್ಕರಣೆಗೆ ಸಹಕರಿಸಬೇಕು. ಇಲ್ಲದಿದ್ದರೆ ಗದಗ ಜಿಲ್ಲಾದ್ಯಂತ ಬಿಜೆಪಿ ಯುವ ಮೋರ್ಚಾ ವತಿಯಿಂದ ಹೋರಾಟ ನಡೆಸಲಾಗುವುದು ಎಂದು ಸಂತೋಷ ಅಕ್ಕಿ ಪ್ರಕಟಣೆಯಲ್ಲಿ ಎಚ್ಚರಿಸಿದ್ದಾರೆ.

## ಹಿಂಗಾರು ಬಿತ್ತನೆ ಬೀಜ ರಿಯಾಯಿತಿ ದರದಲ್ಲಿ ಲಭ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

2026–27ನೇ ಸಾಲಿನ ಹಿಂಗಾರು ಹಂಗಾಮಿಗೆ ಕಡಲೆ, ಜೋಳ, ಗೋಧಿ ಹಾಗೂ ಶೇಂಗಾ ಬಿತ್ತನೆ ಬೀಜಗಳನ್ನು ರೈತ ಸಂಪರ್ಕ ಕೇಂದ್ರಗಳು ಮತ್ತು ಹೆಚ್ಚುವರಿ ಬೀಜ ವಿತರಣಾ ಕೇಂದ್ರಗಳ ಮೂಲಕ ರಿಯಾಯಿತಿ ದರದಲ್ಲಿ ವಿತರಿಸಲಾಗುತ್ತಿದೆ.

ರೈತರಿಗೆ ಗರಿಷ್ಠ 5 ಎಕರೆ ಅಥ-'ವಾ ಅವರ ಜಮೀನಿನ ಹಿಡುವಳಿಗೆ ಅನುಗುಣವಾಗಿ ಬೀಜ ವಿತರಿಸಲಾಗುತ್ತಿದ್ದು, ಜಿಲ್ಲೆಯಲ್ಲಿ ಯಾವುದೇ ಬಿತ್ತನೆ ಬೀಜದ ಕೊರತೆ ಇಲ್ಲ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

*ಬೀಜಗಳ ಪೂರ್ಣ ದರ ಮತ್ತು ರಿಯಾಯಿತಿ ದರ (ಪ್ರತಿ ಕೆ.ಜಿ.)*

ಕಡಲೆ: ಪೂರ್ಣ ದರ 90. ಸಾಮಾನ್ಯ ವರ್ಗಕ್ಕೆ 25, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ 37.50.

ಜೋಳ: ಪೂರ್ಣ ದರ 68.50. ಸಾಮಾನ್ಯ ವರ್ಗಕ್ಕೆ 20, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ 30.

ಗೋಧಿ: ಪೂರ್ಣ ದರ 77.50. ಸಾಮಾನ್ಯ ವರ್ಗಕ್ಕೆ 15, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ 22.50.

ಶೇಂಗಾ: ಪೂರ್ಣ ದರ 125. ಸಾಮಾನ್ಯ ವರ್ಗಕ್ಕೆ 19, ಪರಿಶಿಷ್ಟ ಪಂಗಡದವರಿಗೆ 28.50.

## ರೆಡ್ ರಿಬ್ಬನ್ ರನ್ ಮ್ಯಾರಾಥಾನ್‌ನಲ್ಲಿ ವಿದ್ಯಾರ್ಥಿನಿಯರ ಸಾಧನೆ



**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಮಟ್ಟದ 5 ಕಿ.ಮೀ. ರೆಡ್ ರಿಬ್ಬನ್ ರನ್ ಮ್ಯಾರಾಥಾನ್‌ನಲ್ಲಿ ಹುಲಕೋಟಿಯ ಶ್ರೀ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿನಿಯರಾದ ಪೂರ್ಣಿಮಾ ಭಜಂತ್ರಿ ನಾಲ್ಕನೇ ಹಾಗೂ ಶಶಿಕಲಾ ಗಂಜಲ ಐದನೇ ಸ್ಥಾನ ಗಳಿಸಿ ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ, ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಆರೋಗ್ಯ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಎಚ್‌ಐವಿ ತಡೆಗಟ್ಟುವಿಕೆ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಸೆ. 29ರಂದು ಮ್ಯಾರಾಥಾನ್ ಆಯೋಜಿಸಲಾಗಿತ್ತು. ಇದರಲ್ಲಿ ಕಾಲೇಜಿನ 16 ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿದ್ದರು.

ಸಾಧಕ ವಿದ್ಯಾರ್ಥಿಗಳನ್ನು ಅಭಿನಂದಿಸಿ ಮಾತನಾಡಿದ ಕಾಲೇಜಿನ ಪ್ರಾಂಶುಪಾಲ ಡಾ. ಅಪ್ಪಣ್ಣ ಎನ್. ಹಂಜೆ, ಕ್ರೀಡೆ ಮತ್ತು ಆರೋಗ್ಯ ಜಾಗೃತಿ ಚಟುವಟಿಕೆಗಳು ವಿದ್ಯಾರ್ಥಿಗಳಲ್ಲಿ ಆರೋಗ್ಯಕರ ಜೀವನಶೈಲಿಯನ್ನು ಬೆಳೆಸಲು ಸಹಕಾರಿಯಾಗಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಯುವ ರೆಡ್ ಕ್ರಾಸ್ ಮತ್ತು ರೆಡ್ ರಿಬ್ಬನ್ ಘಟಕದ ಕಾರ್ಯಕ್ರಮಾಧಿಕಾರಿ ಭೀಮೇಶ, ಐಕ್ಯೂಎಸಿ ಸಂಯೋಜಕ ಡಾ. ಜಿತೇಂದ್ರ ಜಹಗೀರದಾರ ಸೇರಿದಂತೆ ಕಾಲೇಜಿನ ವಿವಿಧ ವಿಭಾಗಗಳ ಸಂಯೋಜಕರು, ಉಪನ್ಯಾಸಕರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದು ವಿದ್ಯಾರ್ಥಿಗಳನ್ನು ಅಭಿನಂದಿಸಿದರು. ಕಾರ್ಯಕ್ರಮದಲ್ಲಿ ಮಹಾಂತೇಶ ಸ್ವಾಗತಿಸಿದರು. ಸಾವಿತ್ರಿ ಟಿ. ವಂದಿಸಿದರು.

## ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಮಾಧ್ಯಮ ಸಾಕ್ಷರತೆ ಕಾರ್ಯಾಗಾರ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಕರ್ನಾಟಕ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ ವಿದ್ಯಾರ್ಥಿಗಳಿಗಾಗಿ ಮಾಧ್ಯಮ ಸಾಕ್ಷರತೆ ಹಾಗೂ ಪತ್ರಿಕೋದ್ಯಮದಲ್ಲಿ ಬಳಸುವ ಸಾಫ್ಟ್‌ವೇರ್‌ಗಳ ಕುರಿತು ಒಂದು ದಿನದ ಕಾರ್ಯಾಗಾರ ಬುಧವಾರ ನಡೆಯಿತು.

ಗ್ರಾಮ ಭಾರತ ದಿನಪತ್ರಿಕೆಯ ಸಂಪಾದಕ ಅರುಣ್ ಬಡಿಗೇರ್ ಅವರು ಅಡೋಬ್ ಇನ್‌ಡಿಸೈನ್ ಮತ್ತು ಅಡೋಬ್ ಫೋಟೋಶಾಪ್ ಸಾಫ್ಟ್‌ವೇರ್‌ಗಳ ಕುರಿತು ಪ್ರಾಯೋಗಿಕ ತರಬೇತಿ ನೀಡಿದರು. ಸಾಫ್ಟ್‌ವೇರ್‌ಗಳ ಪ್ರಮುಖ ಉಪಕರಣಗಳು ಹಾಗೂ ಅವುಗಳ ಬಳಕೆಯನ್ನು ನೇರ ಪ್ರದರ್ಶನ ಮತ್ತು ದೃಶ್ಯ ಉದಾಹರಣೆಗಳ ಮೂಲಕ ವಿವರಿಸಿದರು.

ಕಾರ್ಯಾಗಾರದಲ್ಲಿ ಮಾಧ್ಯಮ ಸಾಕ್ಷರತೆ, ಮಾಹಿತಿಯ ವಿಶ್ಲೇಷಣೆ ಹಾಗೂ ಮಾಧ್ಯಮ ವಿಷಯಗಳ ವಿಮರ್ಶಾತ್ಮಕ ಪರಿಶೀಲನೆಯ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಲಾಯಿತು. ಪತ್ರಿಕೋದ್ಯಮ ಕ್ಷೇತ್ರಕ್ಕೆ ಅಗತ್ಯವಿರುವ ತಾಂತ್ರಿಕ ಮತ್ತು ಪ್ರಾಯೋಗಿಕ ಕೌಶಲಗಳನ್ನು ಬೆಳೆಸಿಕೊಳ್ಳುವ ಉದ್ದೇಶದಿಂದ ಕಾರ್ಯಾಗಾರ ಆಯೋಜಿಸಲಾಗಿತ್ತು.

### ಗದಗದಲ್ಲಿ ರಾಜ್ಯಮಟ್ಟದ ಕುಸ್ತಿ ಅಖಾಡಕ್ಕೆ ಸಿದ್ಧತೆ: ಡಿಸಿ ಶ್ರೀಧರ್

# ಕ್ರೀಡಾಪಟುಗಳಿಗೆ ಸೌಲಭ್ಯ ಕಲ್ಪಿಸುವಲ್ಲಿ ಲೋಪವಾದರೆ ಸಹಿಸಲ್ಲ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯಮಟ್ಟದ ಕುಸ್ತಿ ಪಂದ್ಯಾವಳಿ ಆಯೋಜನೆಯ ಹೊಣೆ ಹೊತ್ತಿರುವ ಗದಗ ಜಿಲ್ಲೆಯಲ್ಲಿ ಸಿದ್ಧತೆಗಳು ಅಚ್ಚುಕಟ್ಟಾಗಿ ನಡೆಯಬೇಕು. ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸುವ ಕ್ರೀಡಾಪಟುಗಳಿಗೆ ಯಾವುದೇ ತೊಂದರೆಯಾಗದಂತೆ ಅಗತ್ಯ ವ್ಯವಸ್ಥೆಗಳನ್ನು ಕಲ್ಪಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ (ಅ. 9) ನಡೆದ ರಾಜ್ಯಮಟ್ಟದ ಕುಸ್ತಿ ಪಂದ್ಯಾವಳಿಯ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

14 ಮತ್ತು 17 ವರ್ಷದೊಳಗಿನ ಕುಸ್ತಿಪಟುಗಳು, ತರಬೇತುದಾರರು ಹಾಗೂ ತಂಡಗಳಿಗೆ ಸೂಕ್ತ ವಸತಿ ವ್ಯವಸ್ಥೆ ಕಲ್ಪಿಸಬೇಕು. ಕ್ರೀಡಾಪಟುಗಳ ಆಗಮನದ ಸಮಯ, ಸಂಖ್ಯೆ ಹಾಗೂ ವಸತಿ ವಿವರಗಳನ್ನು ಮುಂಚಿತವಾಗಿ ಸಿದ್ಧಪಡಿಸಿ, ಕ್ರೀಡಾಂಗಣಕ್ಕೆ ತೆರಳಲು ಅಗತ್ಯ ಸಾರಿಗೆ ವ್ಯವಸ್ಥೆ ಮಾಡಬೇಕು. ಪಂದ್ಯಾವಳಿಯಲ್ಲಿ ಯಾವುದೇ ಗೊಂದಲ ಉಂಟಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಸೂಚಿಸಿದರು.

ಕುಸ್ತಿಪಟುಗಳ ಆರೋಗ್ಯದ ದೃಷ್ಟಿಯಿಂದ ಪೌಷ್ಟಿಕ ಆಹಾರ, ಶುದ್ಧ ಕುಡಿಯುವ ನೀರು ಹಾಗೂ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಕ್ರೀಡಾಪಟುಗಳ ಆಹಾರ ಪದ್ಧತಿಗೆ ಅನುಗುಣವಾಗಿ ಚಪಾತಿ, ಧಾನ್ಯಗಳು ಸೇರಿದಂತೆ ಪೌಷ್ಟಿಕ ಆಹಾರ ಒದಗಿಸಬೇಕು.



ತುರ್ತು ವೈದ್ಯಕೀಯ ಸೇವೆ ಮತ್ತು ಪ್ರಾಥಮಿಕ ಚಿಕಿತ್ಸಾ ಸೌಲಭ್ಯಗಳನ್ನು ಸ್ಥಳದಲ್ಲಿ ಸಿದ್ಧವಾಗಿಟ್ಟುಕೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ಕ್ರೀಡಾಪಟುಗಳ ವಯಸ್ಸಿನ ಕುರಿತು ಯಾವುದೇ ಅಕ್ರಮ ನಡೆಯದಂತೆ ಖಂಖಿಖ ತಂತ್ರಾಂಶ ಹಾಗೂ ಶಾಲಾ ದಾಖಲೆಗಳನ್ನು ಕಡ್ಡಾಯವಾಗಿ ಪರಿಶೀಲಿಸಬೇಕು. ಪ್ರತಿ ವಸತಿ ನಿಲಯಕ್ಕೆ ನೋಡಲ್ ಅಧಿಕಾರಿಯನ್ನು ನೇಮಿಸಿ, ಕ್ರೀಡಾಪಟುಗಳ ಸುರಕ್ಷತೆ ಮತ್ತು ಅಗತ್ಯ ಸೌಲಭ್ಯಗಳ ಮೇಲ್ವಿಚಾರಣೆ ನಡೆಸಬೇಕು ಎಂದರು.

ಪಂದ್ಯಗಳಿಗೆ ಗುಣಮಟ್ಟದ ಮ್ಯಾಟ್‌ಗಳನ್ನು ಅಳವಡಿಸಬೇಕು.

> ರಾಜ್ಯಮಟ್ಟದ ಕುಸ್ತಿ ಪಂದ್ಯಾವಳಿಗೆ ಆಗಮಿಸುವ ಕ್ರೀಡಾಪಟುಗಳಿಗೆ ಯಾವುದೇ ತೊಂದರೆಯಾಗದಂತೆ ವಸತಿ, ಸಾರಿಗೆ, ಪೌಷ್ಟಿಕ ಆಹಾರ ಹಾಗೂ ವೈದ್ಯಕೀಯ ಸೌಲಭ್ಯಗಳನ್ನು ಕಲ್ಪಿಸಬೇಕು. ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ, ಪಂದ್ಯಾವಳಿ ಯನ್ನು ಶಿಸ್ತುಬದ್ಧವಾಗಿ ಮತ್ತು ಯಶಸ್ವಿಯಾಗಿ ನಡೆಸಬೇಕು.
>
> – ಸಿ.ಎನ್. ಶ್ರೀಧರ, ಜಿಲ್ಲಾಧಿಕಾರಿ

ತೀರ್ಪುಗಾರರ ನಿರ್ಧಾರಗಳಿಗೆ ಪೂರಕವಾಗಿ ಡಿಜಿಟಲ್ ತಂತ್ರಜ್ಞಾನ ವ್ಯವಸ್ಥೆ ಕಲ್ಪಿಸಬೇಕು. ತೀರ್ಪುಗಾರರು ಹಾಗೂ ಅಧಿಕಾರಿಗಳ ಜವಾಬ್ದಾರಿಗಳನ್ನು ಸ್ಪಷ್ಟಪಡಿಸಿ, ಪಂದ್ಯಗಳು ನಿಗದಿತ ವೇಳಾಪಟ್ಟಿಯಂತೆ ನಡೆಯುವಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಕುಲ್ ಜೈನ್, ಅಪರ ಜಿಲ್ಲಾಧಿಕಾರಿ ಡಾ. ದುರ್ಗೇಶ್ ಕೆ.ಆರ್., ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಎಸ್. ಬುರಡಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಪಂದ್ಯಾವಳಿ ಸಂಘಟನಾ ಸಮಿತಿಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

---

### ವಸತಿ, ಮೂಲಸೌಕರ್ಯ ಹಾಗೂ ಸಾಮಾಜಿಕ ಭದ್ರತೆ ಕಲ್ಪಿಸಲು ಎ. ನರಸಿಂಹಮೂರ್ತಿ ಒತ್ತಾಯ

# ಸ್ಲಂ ಜನರ ಶಿಕ್ಷಣ, ಆರೋಗ್ಯಕ್ಕೆ ಹೆಚ್ಚಿನ ಆದ್ಯತೆ ನೀಡಿ



> ಸ್ಲಂ ನಿವಾಸಿಗಳಿಗೆ ವಸತಿ ಹಾಗೂ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವುದರ ಜತೆಗೆ ಶಿಕ್ಷಣ, ಆರೋಗ್ಯ ಮತ್ತು ಸಾಮಾಜಿಕ ಭದ್ರತೆಗೂ ಸರ್ಕಾರಗಳು ಹೆಚ್ಚಿನ ಆದ್ಯತೆ ನೀಡಬೇಕು.
>
> – ಎ. ನರಸಿಂಹಮೂರ್ತಿ, ರಾಜ್ಯ ಸಂಚಾಲಕರು, ಸ್ಲಂ ಜನಾಂದೋಲನ–ಕರ್ನಾಟಕ

**ವಿಜಯಸಾಕ್ಷಿ ಸುದ್ದಿ, ಗದಗ**

ಕೊಳಗೇರಿ ಪ್ರದೇಶಗಳಲ್ಲಿ ವಾಸಿಸುತ್ತಿರುವ ಜನರು ಅನೇಕ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಸರ್ಕಾರ ಹಾಗೂ ಸ್ಥಳೀಯ ಆಡಳಿತ ವ್ಯವಸ್ಥೆಗಳು ಸ್ಲಂ ನಿವಾಸಿಗಳ ಸಮಸ್ಯೆಗಳಿಗೆ ಸಮರ್ಪಕ ಆದ್ಯತೆ ನೀಡುತ್ತಿಲ್ಲ. ಹೀಗಾಗಿ ರಾಜ್ಯದ ಪ್ರತಿ ಜಿಲ್ಲೆಯಲ್ಲಿಯೂ ಸ್ಲಂ ನಿವಾಸಿಗಳಿಗೆ ವಸತಿ ಹಾಗೂ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವುದರ ಜತೆಗೆ ಶಿಕ್ಷಣ, ಆರೋಗ್ಯ ಮತ್ತು ಸಾಮಾಜಿಕ ಭದ್ರತೆಗೂ ಸರ್ಕಾರಗಳು ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸ್ಲಂ ಜನಾಂದೋಲನ–ಕರ್ನಾಟಕದ ರಾಜ್ಯ ಸಂಚಾಲಕ ಎ. ನರಸಿಂಹಮೂರ್ತಿ ಒತ್ತಾಯಿಸಿದರು.

ನಗರದ ಐಎಂಎ ಹಾಲ್‌ನಲ್ಲಿ ಸ್ಲಂ ಜನಾಂದೋಲನ–ಕರ್ನಾಟಕ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿಯ ಪದಾಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಜ್ಯದ ವಿವಿಧ ಜಿಲ್ಲಾ ಕೇಂದ್ರಗಳಲ್ಲಿ ಸ್ಲಂ ನಿವಾಸಿಗಳ ಭೂಮಿಹಕ್ಕು ಹಾಗೂ ವಸತಿಗಾಗಿ ಸಂಘಟನೆಯು ವತಿಯಿಂದ ನಿರಂತರ ಹೋರಾಟಗಳನ್ನು ನಡೆಸಿಕೊಂಡು ಬರಲಾಗಿದೆ. ಇದೀಗ ಸ್ಲಂ ಜನರ ಸಾಮಾಜಿಕ ಭದ್ರತೆಯ ಭಾಗವಾಗಿ ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳಿಗೆ ಹೆಚ್ಚಿನ ಆದ್ಯತೆ ನೀಡಲು ಸಂಘಟನೆ ಮುಂದಾಗಿದೆ ಎಂದು ತಿಳಿಸಿದರು.

ಎಪಿಪಿಐನ ನಗರವಂಚಿತ ಸಮುದಾಯಗಳ ತಜ್ಞ ಮಲಾರ ವಿಜಯ ಮಾತನಾಡಿ, ನಗರ ಮಟ್ಟದಲ್ಲಿ ಸಂಪನ್ಮೂಲ ಕೇಂದ್ರಗಳನ್ನು ಪ್ರಾರಂಭಿಸಿ, ನಗರವಂಚಿತ ಸಮುದಾಯಗಳಿಗೆ ಸರ್ಕಾರದ ಯೋಜನೆಗಳ ಕುರಿತು ಮಾಹಿತಿ ನೀಡಲಾಗುವುದು. ಸ್ಲಂ ಪ್ರದೇಶಗಳ ಮಕ್ಕಳ ಶಿಕ್ಷಣ ಮತ್ತು ಆರೋಗ್ಯಕ್ಕೆ ಆದ್ಯತೆ ನೀಡಿ, ಅವರ ಉಜ್ವಲ ಭವಿಷ್ಯಕ್ಕಾಗಿ ಸಂಘಟನೆಯಿಂದ ನಿರಂತರವಾಗಿ ಕೆಲಸ ಮಾಡಲಾಗುವುದು ಎಂದರು.

ಸ್ಲಂ ಪ್ರದೇಶದ ಮಹಿಳೆಯರು ಹಾಗೂ ಯುವಕರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಮಾಹಿತಿ ಸಂಗ್ರಹಿಸಿ, ಅವರ ಬೇಡಿಕೆಗಳಿಗೆ ಅನುಗುಣವಾಗಿ ಮುಂದಿನ ದಿನಗಳಲ್ಲಿ ಸಂಘಟನೆಯ ವತಿಯಿಂದ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದು ತಿಳಿಸಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ್ ಆರ್. ಮಾನ್ವಿ ಪ್ರಾಸ್ತಾವಿಕವಾಗಿ ಮಾತನಾಡಿ, 2007ರಿಂದ ನಗರದ ಸ್ಲಂ ನಿವಾಸಿಗಳಿಗೆ ಭೂಮಿಹಕ್ಕು, ಹಕ್ಕುಪತ್ರ, ವಸತಿ ಹಾಗೂ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ನಿರಂತರ ಹೋರಾಟ ನಡೆಸಿಕೊಂಡು ಬರಲಾಗಿದೆ. ಈ ಹೋರಾಟಗಳ ಪರಿಣಾಮವಾಗಿ ಕೊಳಗೇರಿ ಪ್ರದೇಶಗಳ ನಿವಾಸಿಗಳ ವಸತಿ ಹಾಗೂ ಅಭಿವೃದ್ಧಿಗೆ ವಿಶೇಷ ಗಮನ ನೀಡುವಂತಾಗಿದೆ. ಗದಗ ಜಿಲ್ಲೆಯಲ್ಲಿ ಸ್ಲಂ ನಿವಾಸಿಗಳ ಬಲಿಷ್ಠ ಸಂಘಟನೆಯನ್ನು ಕಟ್ಟುವ ಮೂಲಕ ನಗರವಂಚಿತ ಸಮುದಾಯಗಳ ಪರವಾಗಿ ಧ್ವನಿಯಾಗಿ ಸಂಘಟನೆ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸ್ಲಂ ಜನಾಂದೋಲನ–ಕರ್ನಾಟಕ ರಾಜ್ಯ ಸಮಿತಿ ಮುಖಂಡರಾದ ಸುಜಾಯತ, ಸ್ಲಂ ಸಮಿತಿ ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಸಮಿತಿ ಮುಖಂಡರಾದ ಶರಣಪ್ಪ ಸೂಡಿ, ಪುಷ್ಪಾ ಬಿಜಾಪೂರ, ರೋಣ ತಾಲೂಕು ಸಮಿತಿ ಅಧ್ಯಕ್ಷ ಬಸಪ್ಪ ಪರಸಪ್ಪ ಕುರಿ, ಸಲೀಂ ಹರಿಹರ, ಖಾಜಾಸಾಬ ಇಸ್ಮಾಯಿಲನವರ, ಸಾಕ್ರುಬಾಯಿ ಗೋಸಾವಿ, ನಾಗರತ್ನ ಬನಗಾರ, ವಿಶಾಲಕ್ಷಿ ಹಿರೇಗೌಡ್ರ, ಲಕ್ಷ್ಮೀ ಮಳೆಕರ, ಮಕ್ತುಮಸಾಬ ಮುಲ್ಲಾನವರ, ರವಿ ಗೋಸಾವಿ, ಮಂಜುನಾಥ ಶ್ರೀಗಿರಿ, ಅಫ್ರೋಜಾ ಗುಳಗುಂದಿ, ರೇಷ್ಮಾ ನಾಗನೂರ, ಹುಸೇನ ಮುಲ್ಲಾನವರ, ದಾದು ಗೋಸಾವಿ, ರಿಜ್ವಾನ ಮುಲ್ಲಾ ಹಾಗೂ ನಜೀರಅಹ್ಮದ ಹಾವಗಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

---

# ಕಸಾಪ ದತ್ತಿ ಉಪನ್ಯಾಸ ಇಂದು

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ತ್ಯಾಗವೀರ ಸಿರಸಂಗಿ ಲಿಂಗರಾಜ ಹಾಗೂ ಪಾರ್ವತಿ ಚಂದ್ರಶೇಖರ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಅ. 10ರಂದು ಸಂಜೆ 6.30ಕ್ಕೆ ನಗರದ ತೋಂಟದ ಸಿದ್ಧಲಿಂಗಶ್ರೀ ಕನ್ನಡ ಭವನದಲ್ಲಿ ಆಯೋಜಿಸಲಾಗಿದೆ.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ವಿಶ್ರಾಂತ ಉಪನ್ಯಾಸಕ ಆರ್.ಎಫ್. ಲೊಟಗೇರಿ ಅವರು ಜಾನಪದ ಸಾಹಿತ್ಯ ಕುರಿತು ಉಪನ್ಯಾಸ ನೀಡುವರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು ಹಾಗೂ ಪರಿಷತ್ತಿನ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಪರಿಷತ್ತಿನ ಕಾರ್ಯದರ್ಶಿಗಳಾದ ಶಿವಾನಂದ ಗಿಡ್ನಂದಿ, ಕಿಶೋರಬಾಬು ನಾಗರಕಟ್ಟಿ, ಡಿ.ಎಸ್. ಬಾಪುರಿ, ದತ್ತಪ್ರಸನ್ನ ಪಾಟೀಲ ಹಾಗೂ ಶ್ರೀಕಾಂತ ಬಡ್ಡೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

# ನಾಳೆ ಪುಟ್ಟರಾಜ ನಗರದಲ್ಲಿ ಶ್ರೀದೇವಿ ಪುರಾಣ ಪ್ರವಚನ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಸಂಭಾಪೂರ ರಸ್ತೆಯ ಪುಟ್ಟರಾಜ ನಗರದ ಶ್ರೀ ಸಿದ್ಧಿವಿನಾಯಕ ದೇವಸ್ಥಾನ ಟ್ರಸ್ಟ್ ಕಮಿಟಿ ವತಿಯಿಂದ ಅ. 11ರಂದು ಸಂಜೆ 5.30ಕ್ಕೆ ಶ್ರೀದೇವಿ ಪುರಾಣ ಪ್ರವಚನದ ಪ್ರಾರಂಭೋತ್ಸವ ಆಯೋಜಿಸಲಾಗಿದೆ.

ನಿವೃತ್ತ ಪ್ರಾಧ್ಯಾಪಕ ಶಿವಾನಂದ ಹೊಂಬಳ ಅವರು ಪುರಾಣ ಪ್ರವಚನ ನೀಡುವರು. ಹಿರಿಯ ಸಾಹಿತಿ ಟಿ.ವಿ. ಮಾಗಳದ ಉಪಸ್ಥಿತರಿರುವರು. ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಉದ್ಘಾಟಿಸುವರು. ಉದ್ಯಮಿ ರಾಜು ಗುಡಿಮನಿ, ಪ್ರಥಮ ದರ್ಜೆ ಗುತ್ತಿಗೆದಾರ ಆಂಜನೇಯ ಕಟಗಿ ಹಾಗೂ ಬಿಜೆಪಿ ಜಿಲ್ಲಾಧ್ಯಕ್ಷ ತೋಟಪ್ಪ ಕುರಡಗಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಶ್ರೀ ಸಿದ್ಧಿವಿನಾಯಕ ದೇವಸ್ಥಾನ ಟ್ರಸ್ಟ್ ಕಮಿಟಿ ಅಧ್ಯಕ್ಷ ಉಮೇಶಗೌಡ ಪಾಟೀಲ ಅಧ್ಯಕ್ಷತೆ ವಹಿಸುವರು.

ಅ. 11ರಿಂದ ಪ್ರತಿದಿನ ಸಂಜೆ 6ರಿಂದ 8ರವರೆಗೆ ಪುರಾಣ ಪ್ರವಚನ ನಡೆಯಲಿದ್ದು, ನಂತರ ಪ್ರಸಾದ ಸೇವೆ ಇರಲಿದೆ. ಪ್ರಸಾದ ಸೇವೆ ಮಾಡಿಸಲು ಇಚ್ಛಿಸುವವರು ಬಿ.ಎಸ್. ಹುಲಗೂರ ಅವರನ್ನು ಮೊಬೈಲ್ ಸಂಖ್ಯೆ 7204114239 ಮೂಲಕ ಸಂಪರ್ಕಿಸಿ ಹೆಸರು ನೋಂದಾಯಿಸಬೇಕು.

ಅ. 21ರಂದು ಬೆಳಗ್ಗೆ 10.30ಕ್ಕೆ ಶ್ರೀದೇವಿ ಪುರಾಣ ಮಂಗಲೋತ್ಸವ ಹಾಗೂ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಜರುಗಲಿದೆ ಎಂದು ಟ್ರಸ್ಟ್ ಕಮಿಟಿ ಅಧ್ಯಕ್ಷ ಉಮೇಶಗೌಡ ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

### ಮಾನವ ದಿನಗಳ ಸೃಜನೆಗೆ ನಿರ್ಲಕ್ಷ್ಯ ಬೇಡ: ಜಿಪಂ ಸಿಇಒ ಮುಕುಲ್ ಜೈನ್ ತಾಕೀತು

# ಕೆಲಸ ಕೊಡದಿದ್ದರೆ ಶಿಸ್ತು ಕ್ರಮದ ಎಚ್ಚರಿಕೆ

**ವಿಜಯಸಾಕ್ಷಿ ಸುದ್ದಿ, ರೋಣ**

ಗ್ರಾಮೀಣ ಕೂಲಿಕಾರರಿಗೆ ಉದ್ಯೋಗ ಒದಗಿಸುವಲ್ಲಿ ನಿರ್ಲಕ್ಷ್ಯ ತೋರಿದರೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಕುಲ್ ಜೈನ್ ಎಚ್ಚರಿಕೆ ನೀಡಿದರು.

ತಾಲೂಕಿನ ಹೊಸಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೆರೆ ಪುನಶ್ಚೇತನ ಕಾಮಗಾರಿ ವೀಕ್ಷಿಸಿದ ಅವರು, ಬಳಿಕ ತಾಲೂಕು ಪಂಚಾಯಿತಿ ಸಭಾಭವನದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ವಿಬಿಜಿ–ರಾಮ್–ಜಿ ಯೋಜನೆಯ ಅನುಷ್ಠಾನ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದು ಕಟ್ಟುನಿಟ್ಟಿನ ಸೂಚನೆ ನೀಡಿದರು.



ತಾಲೂಕಿನಲ್ಲಿ ಮಾನವ ದಿನಗಳ ಸೃಜನೆ ತೀರಾ ಕಡಿಮೆಯಿದೆ. ಯೋಜನೆಯಡಿ ಅರ್ಹ ಕೂಲಿಕಾರರಿಗೆ ವರ್ಷಕ್ಕೆ 125 ದಿನಗಳವರೆಗೆ ಕೆಲಸ ಒದಗಿಸಲು ಅವಕಾಶವಿದ್ದರೂ ನಿರೀಕ್ಷಿತ ಪ್ರಗತಿ ಸಾಧಿಸದಿರುವುದು ಸರಿಯಲ್ಲ. ಯಾವುದೇ ನೆಪ ಹೇಳದೆ ಪ್ರತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೆಲಸದ ಬೇಡಿಕೆಗೆ ಅನುಗುಣವಾಗಿ ಉದ್ಯೋಗ ಕಲ್ಪಿಸಬೇಕು. ಈ ಕಾರ್ಯದಲ್ಲಿ ನಿರ್ಲಕ್ಷ್ಯ ತೋರಿದರೆ ಶಿಸ್ತು ಕ್ರಮ ಎದುರಿಸಬೇಕಾಗುತ್ತದೆ ಎಂದು ಪಿಡಿಒಗಳು ಹಾಗೂ ಯೋಜನೆಯ ಸಿಬ್ಬಂದಿಗೆ ತಾಕೀತು ಮಾಡಿದರು.

ಕೆಲವು ಕೆಲಸ ಒದಗಿಸದಿರುವುದಕ್ಕೆ ಕಾರಣಗಳೇನು ಎಂದು ಪಿಡಿಒಗಳನ್ನು ಪ್ರಶ್ನಿಸಿದ ಅವರು, ಕ್ರಿಯಾ ಯೋಜನೆಯಲ್ಲಿ ಸಾಮೂಹಿಕ ಕಾಮಗಾರಿಗಳು ಇಲ್ಲದಿದ್ದರೆ ಸೂಕ್ತ ಕಾಮಗಾರಿಗಳನ್ನು ಗುರುತಿಸಿ ಹೆಚ್ಚುವರಿ ಕ್ರಿಯಾ ಯೋಜನೆ ಸಿದ್ಧಪಡಿಸಬೇಕು. ಅನುಮೋದನೆ ದೊರೆತ ಕೂಡಲೇ ಕಾಮಗಾರಿ ಆರಂಭಿಸಬೇಕು ಎಂದು ಸೂಚಿಸಿದರು.

ಮಲ್ಲಾಪುರ ಗ್ರಾಮ ಪಂಚಾಯಿತಿಯಲ್ಲಿ ಮಾನವ ದಿನಗಳ ಸೃಜನೆ ಶೂನ್ಯವಾಗಿರುವ ಕುರಿತು ಪಿಡಿಒ ಲಕ್ಷ್ಮೀ ಗೋಡಿ ಅವರನ್ನು ಪ್ರಶ್ನಿಸಿ ಅಸಮಾಧಾನ ವ್ಯಕ್ತಪಡಿಸಿದರು. ನೀತಿ ಸಂಹಿತೆ ಮುಗಿದ ಬಳಿಕ ನಿಯಮಾನುಸಾರ ಗ್ರಾಮಸಭೆಗಳನ್ನು ನಡೆಸಿ, ಪಂಚತಂತ್ರ ತಂತ್ರಾಂಶದಲ್ಲಿ ದಾಖಲಿಸುವಂತೆ ನಿರ್ದೇಶನ ನೀಡಿದರು.

ಗ್ರಾಮ ಪಂಚಾಯಿತಿಗಳ ನೂತನ ಕಟ್ಟಡ ನಿರ್ಮಾಣಕ್ಕೆ ಅಂದಾಜು ಪಟ್ಟಿ ಸಿದ್ಧಪಡಿಸದಿರುವುದಕ್ಕೆ ಪಂಚಾಯತ್ ರಾಜ್ ಇಲಾಖೆ ಎಂಜಿನಿಯರ್ ಪುರೋಹಿತ ಅವರನ್ನು ತರಾಟೆಗೆ ತೆಗೆದುಕೊಂಡರು. ನೀತಿ ಸಂಹಿತೆ ಮುಗಿದ ಬಳಿಕ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿ ಕಾಮಗಾರಿ ಆರಂಭಿಸಲು ಸೂಚಿಸಿದರು.

ಸ್ವಚ್ಛ ಭಾರತ್ ಮಿಷನ್ ಅಡಿ ಎಲ್ಲ ಗ್ರಾಮ ಪಂಚಾಯಿತಿಗಳಲ್ಲಿ ಘನತ್ಯಾಜ್ಯ ನಿರ್ವಹಣಾ ಘಟಕ (ಖಘಾಒ) ಸ್ಥಾಪಿಸಬೇಕು. ಘಟಕ ಇಲ್ಲದ ಪಂಚಾಯಿತಿಗಳಲ್ಲಿ ಹೆಚ್ಚುವರಿ ಕ್ರಿಯಾ ಯೋಜನೆಯಡಿ ವ್ಯವಸ್ಥೆ ಕಲ್ಪಿಸಬೇಕು. ತ್ಯಾಜ್ಯ ಸಂಗ್ರಹಣಾ ವಾಹನಗಳಿಗೆ ಮಹಿಳಾ ಚಾಲಕರನ್ನು ನೇಮಿಸುವಂತೆಯೂ ಸೂಚಿಸಿದರು.

> ವಿಬಿಜಿ-ರಾಮ್-ಜಿ ಯೋಜನೆಯಡಿ ಕೂಲಿಕಾರರಿಗೆ ಕೆಲಸ ಒದಗಿಸುವುದು ಅಧಿಕಾರಿಗಳ ಜವಾಬ್ದಾರಿ. ನಿರಂತರವಾಗಿ ಕೆಲಸ ಬೇಕಿರುವವರು ಗ್ರಾಮ ಪಂಚಾಯಿತಿಗೆ ನಮೂನೆ-6 ಸಲ್ಲಿಸಬೇಕು. ಕೆಲಸದ ಬೇಡಿಕೆಗೆ ಸ್ಪಂದಿಸಿ ಉದ್ಯೋಗ ಕಲ್ಪಿಸದಿದ್ದರೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು.
>
> – ಮುಕುಲ್ ಜೈನ್, ಜಿಪಂ ಸಿಇಒ

ಸಂಜೀವಿನಿ, ವಸತಿ ಯೋಜನೆಗಳು, ಬಿಆರ್‌ಎಸ್ ಹಾಗೂ ಸಕಾಲ ಸೇರಿದಂತೆ ವಿವಿಧ ಯೋಜನೆಗಳ ಪ್ರಗತಿ ಪರಿಶೀಲಿಸಿದ ಅವರು, ಒಂದು ವಾರದೊಳಗೆ ಪ್ರಗತಿ ಸಾಧಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಹೊಸಳ್ಳಿ ಗ್ರಾಮದಲ್ಲಿ ಕೆರೆ ಪುನಶ್ಚೇತನ ಕಾಮಗಾರಿ ವೀಕ್ಷಣೆ ವೇಳೆ ಕೂಲಿಕಾರರು ಹೂಗುಚ್ಛ ನೀಡಿ ಸಿಇಒ ಅವರನ್ನು ಸ್ವಾಗತಿಸಿದರು. ಬಳಿಕ ಕೂಲಿಕಾರರೊಂದಿಗೆ ಸಂವಾದ ನಡೆಸಿದ ಅವರು, ಕುಂದುಕೊರತೆಗಳನ್ನು ಆಲಿಸಿದರು. ನಿರಂತರವಾಗಿ ಕೆಲಸ ಒದಗಿಸುವಂತೆ ಗ್ರಾಮಸ್ಥರು ಮನವಿ ಮಾಡಿದರು.

ಸಭೆಯಲ್ಲಿ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ, ಜಿಲ್ಲಾ ಯೋಜನಾ ನಿರ್ದೇಶಕ ಎಂ.ವಿ. ಚಳಗೇರಿ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ. ಕಂದಕೂರ, ಸಹಾಯಕ ಲೆಕ್ಕಾಧಿಕಾರಿ ದೇವರಾಜ್ ಸಜ್ಜನಶೆಟ್ಟರ, ತಾಲೂಕು ಯೋಜನಾಧಿಕಾರಿ ಸಿ.ಎಸ್. ನಿಲಗುಂದ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಪಿಡಿಒಗಳು, ಯೋಜನೆಯ ಸಿಬ್ಬಂದಿ ಹಾಗೂ ಕೂಲಿಕಾರರು ಉಪಸ್ಥಿತರಿದ್ದರು. ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ಶಿವನಗೌಡ ಮೆಣಸಗಿ ಸ್ವಾಗತಿಸಿ, ವಂದಿಸಿದರು.